RNI: KARKAN\2019\78042



ಸಂಪಾದಕರು : ಸಿ.ಎನ್.ಸಮಗಂಡಿ.

# ಸತ್ಯಮಿಥ್ಯ

ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

Satyamithi Kannada Daily Morning

ಚನ್ನು ಮೆನ್ಸ್‌ವೇರ್
ಕೊಳ್ಳಿಯವರ ಕ್ರಾಸ್.
ಚನ್ನು ಸ್ಟಿಚ್‌ವರ್ಲ್ಡ್
ಬಿ.ಎಸ್.ಎನ್.ಎಲ್. ಆಫೀಸ್ ಹತ್ತಿರ,
ಜೇಂಟ್ಸ್ ಸ್ಪೇಷಲಿಸ್ಟ್ ಟೇಲರ್
ಗಜೇಂದ್ರಗಡ-582114.
ಸೆಲ್ : 9986982482, 9686165708

ಮರಾಠಾ ಭವನಕ್ಕಾಗಿ ಧ್ವನಿ ಎತ್ತೋರು ಯಾರು? 2

ಹೈನುಗಾರಿಕೆ ರೈತರ ಬದುಕಿನ ಜೀವಾಳವಾಗಿದೆ: ವೀರಣ್ಣ ಕೌಜಲಗಿ 3

ಬಾಗಲಕೋಟೆಯಲ್ಲಿ ಮಳೆಗಾಗಿ ಕತ್ತೆಗಳ ಮದುವೆ! 4

ಸಂಪುಟ(Volume): 1 ಸಂಚಿಕೆ (Issue): 74 ● ಪುಟ (Page): 4 ● ದರ: Rs. 4 | ಗುರುವಾರ 24 ಸೆಪ್ಟೆಂಬರ್ 2026 ● 24 SEPTEMBER 2026 | ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ

# ಆರ್ಥಿಕ ಸಂಕಷ್ಟ: ವಿಧಾನಸೌಧ ಆವರಣದಲ್ಲಿ ಬಿಜೆಪಿ ನಾಯಕರ ಪ್ರತಿಭಟನೆ

## ಆರ್ಥಿಕ ಇಲಾಖೆಯ ಎಚ್ಚರಿಕೆ ಬೆನ್ನಲ್ಲೇ ಸರ್ಕಾರದ ವಿರುದ್ಧ ಕಮಲ ನಾಯಕರ ವಾಗ್ದಾಳಿ: ಆಡಳಿತ ಕುಸಿದಿದೆ ಎಂದು ಆರೋಪ

**ಸತ್ಯಮಿಥ್ಯ ಸುದ್ದಿಮೂಲ ಬೆಂಗಳೂರು:**
ರಾಜ್ಯದ ಆರ್ಥಿಕ ಸ್ಥಿತಿ ದಿನದಿಂದ ದಿನಕ್ಕೆ ಸಂಕಷ್ಟದತ್ತ ಸಾಗುತ್ತಿದ್ದು, ಅಭಿವೃದ್ಧಿ ಕಾಮಗಾರಿಗಳಿಗೆ ಸಂಪೂರ್ಣ ಹಿನ್ನಡೆಯಾಗಿದೆ ಎಂದು ಆರೋಪಿಸಿ ರಾಜ್ಯ ಬಿಜೆಪಿ ನಾಯಕರು ಬುಧವಾರ ವಿಧಾನಸೌಧದ ಆವರಣದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆಯ ಬಳಿ ನಡೆದ ಈ ಧರಣಿ ಸತ್ಯಾಗ್ರಹದ ನೇತೃತ್ವವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಹಾಗೂ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ವಹಿಸಿದ್ದರು. ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರು ಭಾಗವಹಿಸಿ, ರಾಜ್ಯ ಕಾಂಗ್ರೆಸ್ ಸರ್ಕಾರವು ಸಮರ್ಪಕ ಆಡಳಿತ ನೀಡಲು ವಿಫಲವಾಗಿದೆ ಎಂದು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

**ಹಣಕಾಸು ಇಲಾಖೆಯ ಟಿಪ್ಪಣಿಯೇ ಅಸ್ತ್ರ:** ಮಂಗಳವಾರ ಮುಖ್ಯಮಂತ್ರಿಗಳ ಗ್ರಾಮೀಣ ರಸ್ತೆ ಸಂಪರ್ಕ ಯೋಜನೆಯ ಪ್ರಸ್ತಾವನೆಯನ್ನು ಪರಿಶೀಲಿಸುವಾಗ ಹಣಕಾಸು ಇಲಾಖೆಯು ಸರ್ಕಾರಕ್ಕೆ ಎಚ್ಚರಿಕೆಯ ಟಿಪ್ಪಣಿಯೊಂದನ್ನು ನೀಡಿತ್ತು. ಸುಮಾರು ರೂ.10,000 ಕೋಟಿ ವೆಚ್ಚದ ಈ ಯೋಜನೆಯನ್ನು 2026-27 ಮತ್ತು 2027-28ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಪ್ರಸ್ತಾಪಿಸಲಾಗಿತ್ತು. ಆದರೆ, ಬಜೆಟ್‌ನಲ್ಲಿ ಅನುದಾನ ಮೀಸಲಿಡದ ದೊಡ್ಡ ಯೋಜನೆಗಳನ್ನು ಕೈಗೆತ್ತಿಕೊಳ್ಳುವುದರಿಂದ ನಗದು ಹರಿವು ಹಾಗೂ ಆರ್ಥಿಕ ನಿರ್ವಹಣೆಯಲ್ಲಿ ಗಂಭೀರ ಸವಾಲುಗಳು ಎದುರಾಗಲಿವೆ. ಆದ್ದರಿಂದ ನಿಧಿ ಹಂಚಿಕೆಯಲ್ಲಿ 'ವಾಸ್ತವಿಕ ಮತ್ತು ವಿವೇಕಯುತ' ನಿಲುವು ತಳೆಯಬೇಕು ಎಂದು



ಹಣಕಾಸು ಇಲಾಖೆ ಸಲಹೆ ನೀಡಿತ್ತು. ಈ ವಿಷಯವನ್ನು ಪ್ರಮುಖವಾಗಿ ಪ್ರಸ್ತಾಪಿಸಿದ ಬಿಜೆಪಿ ನಾಯಕರು, "ಹಣಕಾಸು ಇಲಾಖೆಯ ಇತ್ತೀಚಿನ ಅಭಿಪ್ರಾಯಗಳೇ ರಾಜ್ಯದ ಕಂಗಾಲು ಆರ್ಥಿಕ ಪರಿಸ್ಥಿತಿಯನ್ನು ಬತ್ತಲೆ ಮಾಡಿವೆ. ಆರ್ಥಿಕ ಮಿತಿಗಳ ಅರಿವಿದ್ದರೂ ಕಾಂಗ್ರೆಸ್ ಸರ್ಕಾರ ಜನರಿಗೆ ಸುಳ್ಳು ಭರವಸೆಗಳನ್ನು ನೀಡುತ್ತಿದೆ" ಎಂದು ಆರೋಪಿಸಿದರು.

**ಆರ್ಥಿಕ ಇಲಾಖೆಯ ವರದಿಯಲ್ಲೇನಿದೆ?:** ವಿತ್ತೀಯ ಕೊರತೆ:

### ರೂ. 2 ಲಕ್ಷ ಕೋಟಿ ಬಾಕಿ ವೆಚ್ಚ:

ರಾಜ್ಯದಲ್ಲಿ ಪ್ರಸ್ತುತ ನಡೆಯುತ್ತಿರುವ ವಿವಿದ ಕಾಮಗಾರಿಗಳ ಬಾಕಿ ವೆಚ್ಚವೇ ಬರೊಬ್ಬರಿ 2 ಲಕ್ಷ ಕೋಟಿ ರೂಪಾಯಿಗಳನ್ನು ಮೀರಿದೆ.
ರೂ. 36,136 ಕೋಟಿ ಬಿಲ್ ಬಾಕಿ: ಲೋಕೋಪಯೋಗಿ, ಜಲಸಂಪನ್ಮೂಲ, ಸಣ್ಣ ನೀರಾವರಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಲ್ಲಿನ ಗುತ್ತಿಗೆದಾರರ ಬಾಕಿ ಬಿಲ್‌ಗಳ ಮೊತ್ತವೇ ಬರೋಬ್ಬರಿ ರೂ. 36,136 ಕೋಟಿಯಷ್ಟಿದೆ.

### ಹಣಕಾಸು ಇಲಾಖೆ ಸಲಹೆ ಒಪ್ಪಿದ ಸರ್ಕಾರ

ಮತ್ತೊಂದೆಡೆ, ಹಣಕಾಸು ಇಲಾಖೆ ನೀಡಿದ ಎಚ್ಚರಿಕೆಯ ಸಲಹೆಯನ್ನು ಮುಖ್ಯಮಂತ್ರಿ ಹಾಗೂ ಹಣಕಾಸು ಖಾತೆಯನ್ನೂ ಹೊಂದಿರುವ ಡಿ.ಕೆ. ಶಿವಕುಮಾರ್ ಅವರು ಮಂಗಳವಾರವೇ ಮುಕ್ತವಾಗಿ ಒಪ್ಪಿಕೊಂಡಿದ್ದಾರೆ. "ಸರ್ಕಾರದ ಹಿತದೃಷ್ಟಿಯಿಂದ ಮತ್ತು ಆರ್ಥಿಕ ಶಿಸ್ತು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಹಣಕಾಸು ಇಲಾಖೆ ಎಚ್ಚರಿಕೆ ನೀಡುವುದರಲ್ಲಿ ಯಾವುದೇ ತಪ್ಪಿಲ್ಲ" ಎಂದು ಅವರು ಸಮರ್ಥಿಸಿಕೊಂಡಿದ್ದಾರೆ.

ಹಣಕಾಸು ಇಲಾಖೆಯ ಅಂದಾಜಿನ ಪ್ರಕಾರ, 2026-27ನೇ ಸಾಲಿನ ಕರ್ನಾಟಕದ ವಿತ್ತೀಯ ಕೊರತೆಯು ವಿತ್ತೀಯ ಜವಾಬ್ದಾರಿ ಮತ್ತು ಬಜೆಟ್ ನಿರ್ವಹಣೆ ಚೌಕಟ್ಟಿನಡಿಯಲ್ಲಿ ಅನುಮತಿಸಲಾದ ಶೇಕಡಾ 3.0 ಮಿತಿಗೆ ತೀರಾ ಹತ್ತಿರದಲ್ಲಿದ್ದು, ಶೇಕಡಾ 2.95 ರಷ್ಟಾಗುವ ಸಾಧ್ಯತೆಯಿದೆ.

# ಕೆಪಿಎಸ್ಸಿ ನೇಮಕಾತಿ ಅಕ್ರಮ: ಎಸ್‌ಐಟಿ ರಚನೆಗೆ ಹೈಕೋರ್ಟ್ ಆದೇಶ

## ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ರಾಜ್ಯ ಸರ್ಕಾರ ತೀರ್ಮಾನ

**ಸತ್ಯಮಿಥ್ಯ ನ್ಯೂಸ್ ಡೆಸ್ಕ್ ಬೆಂಗಳೂರು:**
ಕೆಪಿಎಸ್‌ಸಿ (ಕೆ ಪಿ ಎಸ್ ಸಿ ) ನೇಮಕಾತಿ ಅಕ್ರಮ ಪ್ರಕರಣದ ತನಿಖೆಗೆ ವಿಶೇಷ ತನಿಖಾ ತಂಡ (ಎಸ್ ಐ ಟಿ ) ರಚಿಸುವಂತೆ ಕರ್ನಾಟಕ ಹೈಕೋರ್ಟ್ ನೀಡಿರುವ ಮಹತ್ವದ ಆದೇಶವನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ತನಿಖಾ ತಂಡದ ನೇತೃತ್ವ ವಹಿಸಬೇಕಾದ ಅಧಿಕಾರಿಯನ್ನು ಹೈಕೋರ್ಟ್ ಸ್ವತಃ ಹೆಸರಿಸಿ ಆದೇಶಿಸಿರುವುದಕ್ಕೆ ಸರ್ಕಾರ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಈ ವಿಚಾರದಲ್ಲಿ ಕಾನೂನು ಹೋರಾಟ ನಡೆಸಲು ಮುಂದಾಗಿದೆ.

**ಸರ್ಕಾರದ ಆಕ್ಷೇಪಕ್ಕೆ ಕಾರಣವೇನು?:** ಕೆಪಿಎಸ್‌ಸಿ ಪಶು ವೈದ್ಯಾಧಿಕಾರಿಗಳ ನೇಮಕಾತಿ ಹಾಗೂ ಇತರ ಪರೀಕ್ಷೆಗಳಲ್ಲಿ ನಡೆದಿರುವ ಭಾರಿ ಭ್ರಷ್ಟಾಚಾರದ ಆರೋಪದ ತನಿಖೆಯನ್ನು ಹೈಕೋರ್ಟ್ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರು ಸಿಐಡಿ ಇಲಾಖೆಯಿಂದ ಹಿಂಪಡೆದು, ಎಸ್‌ಐಟಿಗೆ ವಹಿಸಿದ್ದರು. ಈ ವೇಳೆ, ತನ್ನ ಆದೇಶದಲ್ಲಿ ಹಿರಿಯ ಐಪಿಎಸ್ ಅಧಿಕಾರಿ ಅಲೋಕ್ ಕುಮಾರ್ ಅವರ ಹೆಸರನ್ನೇ ಉಲ್ಲೇಖಿಸಿ ಅವರ ನೇತೃತ್ವದಲ್ಲೇ ಎಸ್‌ಐಟಿ ರಚಿಸುವಂತೆ ಸೂಚಿಸಿದೆ. ತನಿಖಾಧಿಕಾರಿಯನ್ನು ಕೋರ್ಟ್ ನಿರ್ದೇಶಿಸಿರುವುದಕ್ಕೆ ಮುಂಚಿನ ಉದಾಹರಣೆಗಳನ್ನು ಆಧರಿಸಿ, ಇದನ್ನು ಕಾನೂನುಬದ್ಧವಾಗಿ ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲು ಸರ್ಕಾರ ನಿರ್ಧರಿಸಿದೆ.

**ಸಿಐಡಿ ತನಿಖೆ ನಡೆಯುವಾಗ ಎಸ್‌ಐಟಿ ಯಾಕೆ?:** ಹೈಕೋರ್ಟ್ ನಿರ್ದಿಷ್ಟ ಅಧಿಕಾರಿಗಳನ್ನು ಹೆಸರಿಸಿ ಎಸ್‌ಐಟಿ ರಚಿಸಲು ಸೂಚಿಸಿರುವುದಕ್ಕೆ ಸರ್ಕಾರ ಆಕ್ಷೇಪ ವ್ಯಕ್ತಪಡಿಸಿದೆ. ಈಗಾಗಲೇ ಅಪರಾಧ ತನಿಖಾ ಇಲಾಖೆ (ಸಿಐಡಿ) ಈ ಪ್ರಕರಣದ ಶೇ. 80ರಷ್ಟು ತನಿಖೆ ಮುಗಿಸಿದೆ. ಅದರಂತೆ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಸೇರಿದಂತೆ ಹಲವರನ್ನು ಬಂಧಿಸಿ, ಮಹತ್ವದ ದಾಖಲೆ, ಹಣ ಹಾಗೂ ಸಿಸಿಟಿವಿ ದೃಶ್ಯಾವಳಿಗಳನ್ನು ವಶಪಡಿಸಿಕೊಳ್ಳಲಾಗಿದೆ.

ನಮ್ಮ ಅಧಿಕಾರಿಗಳು ದಕ್ಷವಾಗಿ ಕೆಲಸ ಮಾಡುತ್ತಿರುವಾಗ ನಿರ್ದಿಷ್ಟ ಅಧಿಕಾರಿಗಳನ್ನೇ ಹೆಸರಿಸಿ ಎಸ್‌ಐಟಿ ರಚಿಸಲು ಹೇಳಿರುವುದು ತಪ್ಪು ಸಂದೇಶ ರವಾನಿಸುತ್ತದೆ ಎಂಬುದು ಸರ್ಕಾರದ ಮುಖ್ಯ ವಾದವಾಗಿದೆ. ಈ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, "ಯಾವ ಅಧಿಕಾರಿಯನ್ನು ತನಿಖಾ ತಂಡಕ್ಕೆ ನೇಮಿಸಬೇಕು ಎಂಬುದು ಕಾರ್ಯಾಂಗದ (ಸರ್ಕಾರದ) ವಿವೇಚನೆಗೆ ಬಿಟ್ಟ ವಿಚಾರ. ಇದರಲ್ಲಿ ನ್ಯಾಯಾಲಯಗಳು ಹೇಗೆ




ಹಸ್ತಕ್ಷೇಪ ಮಾಡಲು ಸಾಧ್ಯ?" ಎಂದು ಪ್ರಶ್ನಿಸಿದ್ದಾರೆ.

**ಎಸ್‌ಐಟಿ ರಚನೆಯಿಂದ ಸರ್ಕಾರಕ್ಕೆ ಆತಂಕ:** ಈ ನಡುವೆ, ಎಸ್‌ಐಟಿ ತನಿಖಾ ವ್ಯಾಪ್ತಿ ಕೇವಲ ಪಶುವೈದ್ಯಾಧಿಕಾರಿ ಹುದ್ದೆಗಳಿಗೆ ಮಾತ್ರ ಸೀಮಿತವಾಗಿಲ್ಲ. ಬದಲಾಗಿ ಆರೋಪಿ ಜ್ಞಾನೇಂದ್ರ ಕುಮಾರ್ ನಿಯಂತ್ರಕರಾಗಿದ್ದ ಅವಧಿಯಲ್ಲಿ ನಡೆದ ಕೆಎಎಸ್, ಎಇ ಸೇರಿದಂತೆ ಕಳೆದ ಮೂರ್ನಾಲ್ಕು ವರ್ಷಗಳ ಎಲ್ಲಾ ನೇಮಕಾತಿ ಪರೀಕ್ಷೆಗಳಿಗೂ ವಿಸ್ತರಿಸಬಹುದು ಎನ್ನಲಾಗಿದೆ.

ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠವು ತನಿಖಾ ವ್ಯಾಪ್ತಿಗೆ ಸಂಬಂಧಿಸಿದಂತೆ, ಕೇವಲ ಎಫ್‌ಐಆರ್‌ನಲ್ಲಿ ಹೆಸರಿಸಲಾದ ವ್ಯಕ್ತಿಗಳು, ಪ್ರಸ್ತುತ ಮಾಡಲಾದ ಆರೋಪಗಳು ಅಥವಾ ಸದ್ಯಕ್ಕೆ ಕಾಣಿಸುತ್ತಿರುವ ಚೌಕಟ್ಟಿಗೆ ಮಾತ್ರ ತನಿಖೆಯನ್ನು ಸೀಮಿತಗೊಳಿಸಬಾರದು ಎಂದು ಸ್ಪಷ್ಟಪಡಿಸಿದೆ.

ಜೊತೆಗೆ, ವಿಚಾರಣೆ ವೇಳೆ ಸಂಗ್ರಹವಾಗುವ ಸಾಕ್ಷ್ಯಗಳು ಬೇರೆ ಯಾವುದೇ ವ್ಯಕ್ತಿಗಳು, ಇತರ ಅಕ್ರಮಗಳು ಅಥವಾ ಆರ್ಥಿಕ ವಹಿವಾಟುಗಳಿಗೆ ಸಂಬಂಧಿಸಿರುವುದು ಕಂಡುಬಂದರೆ, ಸಾಕ್ಷ್ಯಗಳು ಎಲ್ಲಿಗೆ ಕರೆದೊಯ್ಯುತ್ತವೆಯೋ ಅಲ್ಲಿಯವರೆಗೂ ಕಾನೂನು ಪ್ರಕಾರ ತನಿಖೆ ಮುಂದುವರಿಸಲು ಎಸ್‌ಐಟಿಗೆ ಮುಕ್ತ ಅಧಿಕಾರ ನೀಡಲಾಗಿದೆ. ಇದರಿಂದ ಹಲವು ಪ್ರಭಾವಿಗಳು, ಶಾಸಕರು ಮತ್ತು ಸಚಿವರ ಹೆಸರುಗಳು ಹೊರಬರುವ ಸಾಧ್ಯತೆ ಇದ್ದು, ರಾಜಕೀಯವಾಗಿ ಭಾರಿ ಹಿನ್ನಡೆಯಾಗುವ ಭಯ ಸರ್ಕಾರವನ್ನು ಕಾಡುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

# ಶಾಸಕ ಯಶವಂತರಾಯಗೌಡ ಪಾಟೀಲ ರಾಜೀನಾಮೆ ಸಲ್ಲಿಕೆ

## ಇಂಡಿ, ಚಡಚಣ ತಾಲ್ಲೂಕನ್ನು ಬರಪೀಡಿತವೆಂದು ಘೋಷಣೆ ಮಾಡದ್ದಕ್ಕೆ ಅಸಮಾಧಾನ

**ಬೆಂಗಳೂರು:** ಇಂಡಿ ಹಾಗೂ ಚಡಚಣ ತಾಲ್ಲೂಕನ್ನು ಬರ ಪೀಡಿತ ತಾಲ್ಲೂಕು ಎಂದು ಘೋಷಣೆ ಮಾಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿ, ಶಾಸಕ ಸ್ಥಾನಕ್ಕೆ ಯಶವಂತರಾಯ ಗೌಡ ಪಾಟೀಲ್ ರಾಜೀನಾಮೆ ಸಲ್ಲಿಸಿದ್ದಾರೆ.

ಬುಧವಾರ ಬೆಳಗ್ಗೆ ಶಾಸಕ ಯಶವಂತರಾಯ ಗೌಡ ಅವರು ಸ್ಪೀಕರ್ ಜಿಎಸ್ ಪಾಟೀಲ್ ಅವರನ್ನು ಭೇಟಿ ಮಾಡಿ ರಾಜೀನಾಮೆ ಪತ್ರ ಸಲ್ಲಿಕೆ ಮಾಡಿದ್ದಾರೆ. ಇಂಡಿ ಹಾಗೂ ಚಡಚಣ ತಾಲ್ಲೂಕನ್ನು ಬರ ಪೀಡಿತ ಎಂದು ಘೋಷಣೆ ಮಾಡದೆ ಇರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿ ರಾಜೀನಾಮೆ ನೀಡಿದ್ದಾರೆ.



**ಮನವೊಲಿಕೆ ಯತ್ನ:** ಶಾಸಕ ಸ್ಥಾನಕ್ಕೆ ಯಶವಂತರಾಯಗೌಡ ಪಾಟೀಲ್ ರಾಜೀನಾಮೆ ನೀಡಿರುವ ಹಿನ್ನೆಲೆಯಲ್ಲಿ ಮನವೊಲಿಕೆ ಯತ್ನ ನಡೆಯುತ್ತಿದೆ. ಸ್ವತಃ ಸಿಎಂ ಡಿ.ಕೆ ಶಿವಕುಮಾರ್ ಅವರೇ ಶಾಸಕರ ಮನವೊಲಿಕೆ ಪ್ರಯತ್ನಕ್ಕೆ ಮುಂದಾಗಿದ್ದಾರೆ. ವಿಧಾನಸಭೆಯ ಸಿಎಂ ಕಚೇರಿಯಲ್ಲಿ ಮನವೊಲಿಕೆ ಪ್ರಯತ್ನ ನಡೆಸಲಾಗಿದೆ. ಈ ವೇಳೆ ಉದ್ದೇಶಪೂರ್ವಕವಾಗಿ ಕ್ಷೇತ್ರವನ್ನು ಕೈಬಿಡಲಾಗಿದೆ ಎಂದು ಶಾಸಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂದು ತಿಳಿದುಬಂದಿದೆ.

**ಸಚಿವ ಸ್ಥಾನ ಸಿಗದೆ ಇದ್ದಿದ್ದಕ್ಕೆ ರಾಜೀನಾಮೆ ನೀಡಿದ್ದ ಶಾಸಕ:** ಈ ಹಿಂದೆ ಸಚಿವ ಸ್ಥಾನ ಸಿಗದೆ ಇದ್ದ ಕಾರಣಕ್ಕಾಗಿ ಯಶವಂತರಾಯ ಗೌಡ ರಾಜೀನಾಮೆ ಸಲ್ಲಿಕೆ ಮಾಡಿದ್ದರು. ಬಳಿಕ ಸಿಎಂ ಡಿಕೆ ಶಿವಕುಮಾರ್ ಅವರು ಮನವೊಲಿಸಿ ರಾಜೀನಾಮೆಯನ್ನು ವಾಪಸ್ ಪಡೆದುಕೊಂಡಿದ್ದರು. ಇದೀಗ ಎರಡನೇ ಬಾರಿ ರಾಜೀನಾಮೆ ಸಲ್ಲಿಕೆ ಮಾಡಿದ್ದಾರೆ.

**ಸದನದಲ್ಲಿ ಪ್ರಸ್ತಾಪ:** ಶಾಸಕ ರಾಜೀನಾಮೆ ವಿಚಾರವನ್ನು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ವಿಧಾನಸಭೆಯಲ್ಲಿ ಪ್ರಸ್ತಾಪ ಮಾಡಿದರು. ಸರ್ಕಾರಕ್ಕೆ ನಾಚಿಕೆ ಆಗಬೇಕು ಎಂದು ಅಶೋಕ್ ವಾಗ್ದಾಳಿ ನಡೆಸಿದರು. ಈ ವೇಳೆ ಆಡಳಿತ ಮತ್ತು ವಿಪಕ್ಷದ ನಡುವೆ ಮಾತಿನ ಚಕಮಕಿ ನಡೆಯಿತು. ಶಾಸಕರ ರಾಜೀನಾಮೆ ಪತ್ರವನ್ನು ಅಶೋಕ್ ಸದನದಲ್ಲಿ ಪ್ರದರ್ಶನ ಮಾಡಿದರು.

### ರಾಜೀನಾಮೆ ಪತ್ರದಲ್ಲಿ ಏನಿದೆ?

ವಿಜಯಪುರ ಜಿಲ್ಲೆಯ ನಾನು ಪ್ರತಿನಿಧಿಸುವ ಇಂಡಿ ತಾಲ್ಲೂಕು 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ತೀವ್ರ ಬರಗಾಲಕ್ಕೆ ತುತ್ತಾಗಿದೆ. ಆರಂಭದಲ್ಲಿ ಸ್ವಲ್ಪ ಮಳೆ ಬಿದ್ದ ಪ್ರಯುಕ್ತ ರೈತರು ಸಾಲಮಾಡಿ ಬೀಜ, ಗೊಬ್ಬರಗಳನ್ನು ಖರೀದಿಸಿ, ಬಿತ್ತನೆ ಮಾಡಿರುತ್ತಾರೆ. ಆದರೆ, ಸಕಾಲಕ್ಕೆ ಮಳೆಯಾಗದ ಕಾರಣ ಬೆಳೆಗಳು ಬತ್ತಿಹೋಗಿದ್ದು, ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆ ಉಂಟಾಗಿರುತ್ತದೆ.
ಈ ಬಗ್ಗೆ ಮುಖ್ಯಮಂತ್ರಿಗಳು ಹಾಗೂ ಉಪ ಮುಖ್ಯಮಂತ್ರಿಗಳಿಗೆ 28, 8, 2026 ರಂದು ಮನವಿ ಪತ್ರವನ್ನು ಸಲ್ಲಿಸಿ, ಇಂಡಿ ತಾಲ್ಲೂಕನ್ನು ಬರಪೀಡಿತ ತಾಲ್ಲೂಕು ಎಂದು ಘೋಷಿಸುವಂತೆ ಮನವಿ ಪತ್ರ ಸಲ್ಲಿಸಲಾಗಿತ್ತು. ಆದರೆ ವಿಜಯಪುರ ಜಿಲ್ಲೆಯ ಒಟ್ಟು 13 ತಾಲ್ಲೂಕುಗಳ ಪೈಕಿ ನನ್ನ ಇಂಡಿ ಮತ್ತು ಚಡಚಣ ಈ 2 ತಾಲ್ಲೂಕುಗಳನ್ನು ಹೊರತುಪಡಿಸಿ, ಇದುವರೆಗೂ ರಾಜ್ಯದ 188 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿರುತ್ತದೆ. ನಾನು ಆಡಳಿತ ಪಕ್ಷದ ಶಾಸಕನಾಗಿದ್ದು, ನಮ್ಮ ಸರ್ಕಾರಕ್ಕೆ ಮುಜಗರವಾಗಬಾರದೆಂದು ಸೂಕ್ಷ್ಮ ಮತಿಯನಾಗಿ ಹಲವಾರು ಬಾರಿ ಮನವಿ ಮಾಡಿಕೊಂಡಿದ್ದೇನೆ. ಆದರೂ ಸಹ ನಮ್ಮ ಮಾತಿಗೆ, ನಮ್ಮ ಭಾವನೆಗಳಿಗೆ ಬೆಲೆ ಇಲ್ಲದಂತಾಗಿದ್ದು, ಈಗಿನ ರಾಜಕೀಯ ವಾತವಾರಣದಲ್ಲಿ ಬಲಾಢ್ಯರಿಗೆ, ಒತ್ತಡ ತಂತ್ರಗಳನ್ನು ಹೆಣೆಯುವವರಿಗೆ ಮನ್ನಣೆ ನೀಡಲಾಗುತ್ತಿದೆ. ನಮ್ಮಂತಹ ಸೌಮ್ಯ ಸ್ವಭಾವದವರಿಗೆ ಯಾವುದೇ ಕೆಲಸಗಳಿಗೆ ಮನ್ನಣೆ ದೊರೆಯುತ್ತಿಲ್ಲ. ಆದ್ದರಿಂದ ನನ್ನ ಕ್ಷೇತ್ರದ ಜನರ ಆಶೆ, ಆಶೋತ್ತರಗಳಿಗೆ ಸ್ಪಂದಿಸಲು ಸಾಧ್ಯವಾಗದ ಕಾರಣ ಸ್ವ ಇಚ್ಚೆಯಿಂದ ರಾಜೀನಾಮೆ ಸಲ್ಲಿಸುತ್ತಿದ್ದೇನೆ ಎಂದು ಪತ್ರದಲ್ಲಿ ಉಲ್ಲೇಖ ಮಾಡಿದ್ದಾರೆ.

# ಕೈ ಶಾಸಕರ ನಡುವೆ ಮಾತಿನ ಚಕಮಕಿ

**ಬೆಂಗಳೂರು:** ವಿಧಾನ ಸಭೆಯಲ್ಲಿ ಕಾಂಗ್ರೆಸ್ ಶಾಸಕರ ನಡುವೆ ಮಾತಿನ ಚಕಮಕಿ ನಡೆದಿದೆ. ಶಾಸಕ ಯಶವಂತರಾಯಗೌಡ ಪಾಟೀಲ್ ರಾಜೀನಾಮೆ ಕುರಿತಾಗಿ ಆಡಳಿತ ಮತ್ತು ವಿಪಕ್ಷಗಳ ನಡುವೆ ಚರ್ಚೆ, ಗದ್ದಲದ ನಡುವೆಯೇ ಕೋಲಾರ ಜಿಲ್ಲೆಯ ಕಾಂಗ್ರೆಸ್ ಶಾಸಕರ ನಡುವೆ ಜಟಾಪಟಿ ನಡೆದಿದೆ. ಬಂಗಾರಪೇಟೆ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಮತ್ತು ಕೆಜಿಎಫ್ ಶಾಸಕಿ ರೂಪಾ ಶಶಿಧರ್ ಮಧ್ಯೆ ಸದನದಲ್ಲಿ ಮಾತಿನ ಚಕಮಕಿ ನಡೆಯಿತು.



ಬಂಗಾರಪೇಟೆ ಶಾಸಕ ನಾರಾಯಣಸ್ವಾಮಿ ಮತ್ತು ಬಾಗೇಪಲ್ಲಿ ಶಾಸಕರಾದ ಸುಬ್ಬಾರೆಡ್ಡಿ ಕುಳಿತಿದ್ದ ಆಸನದ ಬಳಿ ಹೋಗಿ ಶಾಸಕಿ ರೂಪಾ ಶಶಿಧರ್ ಆಕ್ರೋಶ ಹೊರ ಹಾಕಿದ ಪ್ರಸಂಗ ನಡೆಯಿತು. ಏರುಧ್ವನಿಯಲ್ಲೇ ಶಾಸಕ ನಾರಾಯಣಸ್ವಾಮಿ ಜೊತೆ ಸದನದಲ್ಲಿ ಶಾಸಕಿ ರೂಪಾ ಅವರು ಮಾತನಾಡಿದರು. ನಾರಾಯಣಸ್ವಾಮಿ ಆಸನದ ಬಳಿ ಬಂದು ಏರು ಧ್ವನಿಯಲ್ಲೇ ಮಾತಾನಾಡಿದ ರೂಪಾ ಶಶಿಧರ್ ತಮ್ಮ ಅಸಮಾಧಾನ ಹೊರಹಾಕಿದರು.

ಸದನದಲ್ಲಿ ಬುಧವಾರ ಬಂಗಾರಪೇಟೆ ಶಾಸಕ ನಾರಾಯಣಸ್ವಾಮಿ, ಸುಬ್ಬಾರೆಡ್ಡಿ ಅಕ್ಕಪಕ್ಕ ಕುಳಿತು ಮಾತನಾಡುತ್ತಿದ್ದರು. ಇಬ್ಬರು ಶಾಸಕರು ನಗುನಗುತ್ತಾ ಮಾತನಾಡುವಾಗ ಹಿಂದೆಯಿಂದ ಎದ್ದುಬಂದ ರೂಪಕಲಾ ಕಿಡಿಕಾರಿದ ಘಟನೆ ನಡೆಯಿತು.

**ಸದನದಲ್ಲೇ ಕೂಗಾಟ:** ಇಬ್ಬರು ಶಾಸಕರ ವಿರುದ್ಧ ಏರು ಧ್ವನಿಯಲ್ಲಿ ಆಕ್ರೋಶ ಹೊರಹಾಕಿದ ರೂಪಾ ಶಶಿಧರ್, "ನನ್ನನ್ನ ಅಪಮಾನ ಮಾಡ್ತಾ ಇದ್ದೀರಿ. ನೀವು ಎಲ್ಲ ಒಂದಾಗಿದ್ದೀರಿ. ಏನು ಮಾಡೋದಕ್ಕೆ ಆಗುತ್ತೆ ಎಂದು ಕೂಗಾಡಿದರು. ಅಲ್ಲದೆ, ಟೇಬಲ್ ಬಡಿದು ಆಕ್ರೋಶ ಹೊರಹಾಕಿದರು.

ಘಟನೆಯ ಹಿನ್ನಲೆಯಲ್ಲಿ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ವ್ಯಂಗ್ಯವಾಗಿ ಕಾಂಗ್ರೆಸ್ ಶಾಸಕರ ಕಾಲೆಳೆದರು. "ಇಲ್ಲೊಂದು ಗಲಾಟೆ ಆಗ್ತಿದೆ ನೋಡಿ. ಸುಮ್ನಿರಮ್ಮಾ ಹೊಡಿಬೇಡ" ಎಂದರು.

# ವೃದ್ದೆಗೆ ಕೂಲಿಂಗ್ಲಾಸ್ ತೊಡಿಸಿದ ತಮಿಳುನಾಡು ಸಿಎಂ

**ಚೆನ್ನೈ :** ಬೆಳ್ಳಿತೆರೆಯಿಂದ ರಾಜಕೀಯಕ್ಕೆ ಬಂದು ಮೊದಲ ಪ್ರಯತ್ನದಲ್ಲೇ ಗೆದ್ದು ಸದ್ದು ಮಾಡುತ್ತಿರುವ ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಅವರ ಆಡಳಿತ ದಿನವೂ ಒಂದಲ್ಲಾ ಒಂದು ರೀತಿಯಲ್ಲಿ ಸದ್ದನ್ನು ಮಾಡುತ್ತಿದೆ. ಇತ್ತೀಚೆಗೆ, ಅವರ ಪಾರ್ಟಿಯ (TVK) ಅಭಿಮಾನಿಗಳು, ಭಾವೀ ಪ್ರಧಾನಿ ಎಂದು ಬಿಂಬಿಸಿ, ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡಿದ್ದರು.

ಈಗ, ವಿಜಯ್ ಅವರ ಒಂದು ನಡೆ, ಮತ್ತೆ ಸಾಮಾಜಿಕ ಜಾಲತಾಣದಲ್ಲಿ ಸದ್ದನ್ನು ಮಾಡುತ್ತಿದೆ. ತನ್ನನ್ನು ನೋಡಲು ಬಂದಿದ್ದ ವೃದ್ದೆಯ ಪ್ರೀತಿಗೆ ಕರಗಿದ ಸಿಎಂ ವಿಜಯ್, ತಾವು ಧರಿಸಿಕೊಂಡಿದ್ದ ದುಬಾರಿ ಡಿಯೋರ್ (ChristianDior) ಸನ್‌ಗ್ಲಾಸ್, ಅನ್ನು ಉಡುಗೊರೆಯಾಗಿ ನೀಡಿದ್ದಾರೆ. ಮುಖ್ಯಮಂತ್ರಿಗಳ ಈ ನಡೆಗೆ, ವೃದ್ದೆ ಮೂಕವಿಸ್ಮಿತರಾಗಿದ್ದಾರೆ.

**ವೃದ್ದೆಗೆ ಕೂಲಿಂಗ್ಲಾಸ್ ತೊಡಿಸಿದ ತಮಿಳುನಾಡು ಸಿಎಂ ವಿಜಯ್ ಜೋಸೆಫ್:** ಸಿಎಂ ವಿಜಯ್ ಅವರ ಜನಪ್ರಿಯತೆ ಮತ್ತು ಸಾರ್ವಜನಿಕ ಸಂಪರ್ಕ ಅವರ ರಾಜಕೀಯ ಜೀವನದಲ್ಲೂ ಪ್ರಮುಖವಾಗಿ ಹೈಲೆಟ್ ಆಗುತ್ತಿದೆ. ಅಧಿಕೃತ ಪ್ರವಾಸದ ವೇಳೆ, ತಮ್ಮ ವಾಹನವನ್ನು ನಿಲ್ಲಿಸಲು ಹೇಳಿ, ವೃದ್ದೆಯೊಬ್ಬರಿಗೆ, ತಾನು ಧರಿಸಿದ್ದ ಸನ್‌ಗ್ಲಾಸ್ ಅನ್ನು ಉಡುಗೊರೆಯಾಗಿ ನೀಡಿದ್ದಾರೆ. ಕೂಲಿಂಗ್ಲಾಸ್ ಅನ್ನು ತಾವೇ ಖುದ್ದಾಗಿ, ವೃದ್ದೆಗೆ ಸಿಎಂ ವಿಜಯ್ ತೊಡಿಸಿದ್ದಾರೆ. ಇದರ ವಿಡಿಯೋ ಮತ್ತು ಇಮೇಜ್, ಸಾಮಾಜಿಕ ತಾಣದಲ್ಲಿ ವೈರಲ್ ಆಗುತ್ತಿದೆ.

ಸತ್ಯ ಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ
SATYA MITHI
Kannada Daily Morning

# ಮರಾಠಾ ಭವನಕ್ಕಾಗಿ ಧ್ವನಿ ಎತ್ತೋರು ಯಾರು?

## ಜಮುಖಂಡಿಯಲ್ಲಿ ಸುಮಾರು 40 ಸಾವಿರ ಮರಾಠಾ ಸಮಾಜದ ಜನಸಂಖ್ಯೆ ಎನ್ನಲಾಗಿದ್ದರೂ ಸ್ವಂತ ಸಮುದಾಯ ಭವನವಿಲ್ಲ!

**ಸಚೀನ ಆರ್ ಜಾಧವ ಬಾಗಲಕೋಟೆ**

ಜಮುಖಂಡಿ ನಗರದಲ್ಲಿ ಮರಾಠಾ ಸಮಾಜದ ಜನಸಂಖ್ಯೆ ಗಣನೀಯವಾಗಿದ್ದರೂ, ಸಮಾಜದ ವಿವಿಧ ಕಾರ್ಯಕ್ರಮಗಳನ್ನು ನಡೆಸಲು ಸ್ವಂತ ಸಮುದಾಯ ಭವನ ಇಲ್ಲದಿರುವುದು ಹಲವು ವರ್ಷಗಳಿಂದ ಮುಂದುವರಿದಿರುವ ಪ್ರಮುಖ ಸಮಸ್ಯೆಯಾಗಿದೆ. ಧಾರ್ಮಿಕ, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಚಟುವಟಿಕೆಗಳಿಗೆ ಶಾಶ್ವತ ಕೇಂದ್ರದ ಅಗತ್ಯವಿದ್ದರೂ, ಈ ಬೇಡಿ-ಕೆಗೆ ಇನ್ನೂ ಸ್ಪಷ್ಟ ಪರಿಹಾರ ದೊರಕಿಲ್ಲ ಎಂಬ ಅಸಮಾಧಾನ ಸಮಾಜದವರಲ್ಲಿ ವ್ಯಕ್ತವಾಗುತ್ತಿದೆ.

ಜಮುಖಂಡಿ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮರಾಠಾ ಸಮಾಜದ ಕುಟುಂಬಗಳು ಹೆಚ್ಚಿನ ಸಂಖ್ಯೆಯಲ್ಲಿವೆ. ಸಮಾಜದ ಜನಸಂಖ್ಯೆ ಸುಮಾರು 40 ಸಾವಿರದಷ್ಟಿದೆ ಎನ್ನಲಾಗುತ್ತಿದೆ. ಇಷ್ಟೊಂದು ದೊಡ್ಡ ಸಮುದಾಯಕ್ಕೆ ಸ್ವಂತ ಸಮುದಾಯ ಭವನ ಇಲ್ಲದಿರುವುದು ಸಹಜವಾಗಿಯೇ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಮದುವೆ, ಸಮಾಜದ ಸಭೆ, ವಿದ್ಯಾರ್ಥಿಗಳ ಸನ್ಮಾನ, ಪ್ರತಿಭಾ ಪುರಸ್ಕಾರ, ಸಾಂಸ್ಕೃತಿಕ ಕಾರ್ಯಕ್ರಮ, ಮಹಿಳಾ ಸಂಘಟನೆಗಳ ಚಟುವಟಿಕೆ, ಯುವಕರ ಸಭೆ ಹಾಗೂ ವಿವಿಧ ಸಾಮಾಜಿಕ ಕಾರ್ಯಕ್ರಮಗಳಿಗೆ ಪ್ರತಿಬಾರಿಯೂ ಬೇರೆ ಸ್ಥಳಗಳನ್ನು ಅವಲಂಬಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

**ಕಾರ್ಯಕ್ರಮಕ್ಕೆ ಒಂದಾಗುವ ನಾಯಕರು... ಭವನದ ವಿಚಾರದಲ್ಲಿ ಏಕೆ ಮೌನ?:** ಜಮುಖಂಡಿಯ ಛತ್ರಪತಿ ಶಿವಾಜಿ ಮಹಾರಾಜ ಸರ್ಕಲ್‌ನಲ್ಲಿ ನಡೆಯುವ ಹಲವು ಕಾರ್ಯಕ್ರಮಗಳಲ್ಲಿ ಸಮಾಜದ ಹಿರಿಯರು, ಯುವಕರು ಹಾಗೂ ವಿವಿಧ ಕ್ಷೇತ್ರಗಳ ಮುಖಂಡರು ಪಕ್ಷಾತೀತವಾಗಿ ಭಾಗವಹಿಸುತ್ತಾರೆ. ವಿಠ್ಠಲ ಮಂದಿರ ಸೇರಿದಂತೆ ವಿವಿಧ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಲ್ಲಿ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಸಮಾಜದವರು ಒಂದೇ ವೇದಿಕೆಯಲ್ಲಿ ಸೇರುವ ದೃಶ್ಯ ಸಾಮಾನ್ಯವಾಗಿದೆ.

ಇತ್ತೀಚೆಗೆ ಸಚಿವ ಸಂತೋಷ ಲಾಡ್ ಅವರು ಛತ್ರಪತಿ ಶಿವಾಜಿ ಮಹಾರಾಜ ಸರ್ಕಲ್‌ನ ವಿಠ್ಠಲ ಮಂದಿರಕ್ಕೆ ಭೇಟಿ ನೀಡಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಸಂದರ್ಭದಲ್ಲಿಯೂ ಸಮಾಜದ ಹಿರಿಯರು, ಯುವಕರು ಸೇರಿದಂತೆ ಹಲವರು ಭಾಗವಹಿಸಿದ್ದರು.

ಆದರೆ ಇದೇ ಒಗ್ಗಟ್ಟಿನ ವೇದಿಕೆಯಿಂದ ಸಮಾಜದ ಬಹುದಿನಗಳ ಪ್ರಮುಖ ಬೇಡಿಕೆಯಾದ "ಮರಾಠಾ ಸಮಾಜಕ್ಕೆ ಸ್ವಂತ ಸಮುದಾಯ ಭವನ ಬೇಕು" ಎಂಬ ಧ್ವನಿ ಸರ್ಕಾರದ ಮಟ್ಟಕ್ಕೆ ಎಷ್ಟು ಬಲವಾಗಿ ತಲುಪಿದೆ ಎಂಬ ಪ್ರಶ್ನೆ ಇದೀಗ ಸಮಾಜದೊಳಗೆ ಕೇಳಿಬರುತ್ತಿದೆ.

ಕಾರ್ಯಕ್ರಮಗಳಿಗಾಗಿ ಒಂದಾಗುವ ನಾಯಕತ್ವ, ಸಮಾಜದ ಮೂಲಭೂತ ಅಗತ್ಯಕ್ಕಾಗಿ ಏಕೆ ಒಂದಾಗಬಾರದು? ಸಮಾಜದ ಜನಸಂಖ್ಯೆ, ಸಂಘಟನೆ ಹಾಗೂ ಒಗ್ಗಟ್ಟಿನ ಶಕ್ತಿ ಪ್ರದರ್ಶಿಸುವ ಕಾರ್ಯಕ್ರಮಗಳು ನಡೆಯುತ್ತಿದ್ದರೂ, ಶಾಶ್ವತ ಸಮುದಾಯ ಭವನ ನಿರ್ಮಾಣದ ವಿಚಾರದಲ್ಲಿ ಇನ್ನೂ ನಿರ್ಣಾಯಕ ಹೆಜ್ಜೆ ಏಕೆ ಇಡಲಾಗಿಲ್ಲ ಎಂಬುದು ಚರ್ಚೆಯ ವಿಷಯವಾಗಿದೆ.

**ಭವನ ಎಂದರೆ ಕೇವಲ ಕಟ್ಟಡವಲ್ಲ:** ಸಮುದಾಯ ಭವನ ಎಂದ-ರೆ ನಾಲ್ಕು ಗೋಡೆಗಳ ಕಟ್ಟಡವಷ್ಟೇ ಅಲ್ಲ. ಅದು ಸಮಾಜದ ಶೈಕ್ಷಣಿಕ, ಸಾಂಸ್ಕೃತಿಕ ಮತ್ತು ಸಾಮಾಜಿಕ ಚಟುವಟಿಕೆಗಳಿಗೆ ಶಾಶ್ವತ ಕೇಂದ್ರವಾಗಬಹುದು.

ಯುವಕರಿಗೆ ಮಾರ್ಗದರ್ಶನ ಕಾರ್ಯಕ್ರಮ, ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ, ಮಹಿಳಾ ಸಂಘಟನೆಗಳ ಸಭೆ, ಸಮಾಜದ ಮುಖಂಡರ ಸಭೆ, ಉದ್ಯೋಗ ಹಾಗೂ ಶಿಕ್ಷಣಕ್ಕೆ ಸಂಬಂಧಿಸಿದ ಜಾಗೃತಿ ಕಾರ್ಯಕ್ರಮ, ಸಾಂಸ್ಕೃತಿಕ ಚಟುವಟಿಕೆ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಒಂದೇ ಸ್ಥಳದಲ್ಲಿ ಆಯೋಜಿಸಲು ಅನುಕೂಲವಾಗಲಿದೆ. ಸಮುದಾಯ ಭವನ ನಿರ್ಮಾಣವಾದರೆ ಸಮಾಜದ ಸಂಘಟನೆಗೆ ಮತ್ತಷ್ಟು ಬಲ ಸಿಗುವುದಲ್ಲದೆ, ಮುಂದಿನ ಪೀಳಿಗೆಗೆ ಸಮಾಜದ ಚಟುವಟಿಕೆಗಳಿಗೆ ಶಾಶ್ವತ ವೇದಿಕೆಯೂ ದೊರೆಯಲಿದೆ ಎಂಬುದು ಸಮಾಜದವರ ಆಶಯವಾಗಿದೆ.

**ಭರವಸೆಗಿಂತ ಬೇಕಿದೆ ಸ್ಪಷ್ಟ ಕ್ರಮ:** ಸಮುದಾಯ ಭವನದ ಬೇಡಿ-ಕೆ ವರ್ಷಗಳಿಂದ ಕೇಳಿಬರುತ್ತಿದ್ದರೆ, ಇದೀಗ ಕೇವಲ ಭರವಸೆ ನೀಡುವುದಕ್ಕಿಂತ ಜಾಗ ಗುರುತಿಸುವುದು, ಸರ್ಕಾರದ ಮಟ್ಟದಲ್ಲಿ ಪ್ರಸ್ತಾವನೆ ಸಲ್ಲಿಸುವುದು, ಅಗತ್ಯ ಅನುದಾನ ಮಂಜೂರು ಮಾಡಿಸುವುದು ಹಾಗೂ ಕಾಮಗಾರಿ ಆರಂಭಿಸುವ ಕುರಿತು ಸ್ಪಷ್ಟ ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹ ಕೇಳಿಬರುತ್ತಿದೆ.

ಸಮಾಜದ ಜನಪ್ರತಿನಿಧಿಗಳು ಹಾಗೂ ಮುಖಂಡರು ಈ ವಿಚಾರವನ್ನು ಪಕ್ಷದ ಗಡಿ ಮೀರಿ ಒಗ್ಗಟ್ಟಾಗಿ ಮುಂದಿಟ್ಟರೆ, ಸರ್ಕಾರದ ಗಮನ ಸೆಳೆಯಲು ಸಾಧ್ಯವಾಗಲಿದೆ ಎಂಬ ನಿರೀಕ್ಷೆಯೂ ಇದೆ.

**ಈಗ ಸಮಾಜ ಕೇಳುತ್ತಿರುವ ಪ್ರಶ್ನೆ ಒಂದೇ:** ಛತ್ರಪತಿ ಶಿವಾಜಿ ಮಹಾರಾಜ ಸರ್ಕಲ್‌ನಲ್ಲಿ ಕಾರ್ಯಕ್ರಮಗಳು ನಡೆಯುತ್ತವೆ. ಮುಖಂಡರು ಬರುತ್ತಾರೆ. ಹಿರಿಯರು ಭಾಗವಹಿಸುತ್ತಾರೆ. ಯುವಕರು ಉತ್ಸಾಹದಿಂದ ಸೇರುತ್ತಾರೆ. ಸಮಾಜದ ಒಗ್ಗಟ್ಟಿನ ಮಾತುಗಳು ಕೇಳಿಬರುತ್ತವೆ.

ಆದರೆ ಇದೇ ವೇದಿಕೆಯಿಂದ "ನಮ್ಮ ಸಮಾಜಕ್ಕೆ ಸ್ವಂತ ಸಮುದಾಯ ಭವನ ಬೇಕು" ಎಂಬ ಬೇಡಿಕೆ ಯಾವಾಗ ಸರ್ಕಾರದ ಮುಂದೆ ಒಗ್ಗಟ್ಟಿನ ಧ್ವನಿಯಾಗಿ ಮೊಳಗಲಿದೆ?

ನಾಯಕರು ಬರುತ್ತಾರೆ, ಹೋಗುತ್ತಾರೆ. ಕಾರ್ಯಕ್ರಮಗಳು ನಡೆಯುತ್ತಲೇ ಇರುತ್ತವೆ. ಆದರೆ ಸಮಾಜದ ಬಹುದಿನಗಳ ಸಮುದಾಯ ಭವನದ ಬೇಡಿಕೆ ಮಾತ್ರ ಇನ್ನೂ ಹಾಗೆಯೇ ಉಳಿದಿದೆ. ಈಗ ಸಮಾಜದ ನಿರೀಕ್ಷೆ ಒಂದೇಕಾರ್ಯಕ್ರಮಕ್ಕಾಗಿ ಒಂದಾಗುವ ನಾಯಕರು, ಸಮುದಾಯ ಭವನಕ್ಕಾಗಿ ಯಾವಾಗ ಒಂದಾಗುತ್ತಾರೆ?



### ಸಮುದಾಯ ಭವನ ನಿರ್ಮಾಣಕ್ಕೆ ಸರ್ಕಾರ ಮುಂದಾಗಲಿ

**"ಜಮುಖಂಡಿ ನಗರದಲ್ಲಿ ಮರಾಠಾ ಸಮಾಜದ ಜನರು ಹೆಚ್ಚಿನ ಸಂಖ್ಯೆಯಲ್ಲಿದ್ದರೂ, ಸಮಾಜದ ಕಾರ್ಯಕ್ರಮಗಳನ್ನು ನಡೆಸಲು ಸ್ವಂತ ಸಮುದಾಯ ಭವನ ಇಲ್ಲದಿರುವುದು ವಿಷಾದನೀಯ. ಮದುವೆ, ಸಮಾಜದ ಸಭೆ, ವಿದ್ಯಾರ್ಥಿಗಳ ಸನ್ಮಾನ, ಪ್ರತಿಭಾ ಪುರಸ್ಕಾರ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಿಗೆ ಪ್ರತಿಬಾರಿಯೂ ಬೇರೆ ಸ್ಥಳಗಳನ್ನು ಅವಲಂಬಿಸಬೇಕಾಗಿದೆ. ಸರ್ಕಾರ ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಸಮಾಜದ ಈ ಬಹುದಿನಗಳ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ, ಸೂಕ್ತ ಜಾಗ ಗುರುತಿಸಿ ಅಗತ್ಯ ಅನುದಾನ ಒದಗಿಸುವ ಮೂಲಕ ಶೀಘ್ರದಲ್ಲಿ ಸುಸಜ್ಜಿತ ಸಮುದಾಯ ಭವನ ನಿರ್ಮಿಸಿಕೊಡಬೇಕು."**

**। ಉಮೇಶ್ ಆರ್. ಜಾಧವ, ಮರಾಠಾ ಸಮಾಜದ ಮುಖಂಡರು, ಜಮುಖಂಡಿ-ಸಾವಳಗಿ**

### ಮರಾಠಾ ಸಮಾಜಕ್ಕೆ ಭವನ ಯಾವಾಗ?

**"ಮರಾಠಾ ಸಮಾಜಕ್ಕೆ ಸಮುದಾಯ ಭವನ ಯಾವಾಗ?" ಎಂಬ ಪ್ರಶ್ನೆ ಇದೀಗ ಜಮುಖಂಡಿಯಲ್ಲಿ ಗಂಭೀರ ಚರ್ಚೆಗೆ ಕಾರಣವಾಗಿದೆ. ಸಮಾಜದ ವಿವಿಧ ಕಾರ್ಯಕ್ರಮಗಳಿಗೆ ಶಾಶ್ವತ ವೇದಿಕೆ ಇಲ್ಲದ ಪರಿಸ್ಥಿತಿ ಮುಂದುವರಿದಿದ್ದು, ವರ್ಷಗಳಿಂದ ಕೇಳಿಬರುತ್ತಿರುವ ಬೇಡಿಕೆಗೆ ಇನ್ನೂ ಸ್ಪಷ್ಟ ಪರಿಹಾರ ದೊರಕಿಲ್ಲ. ಜನಪ್ರತಿನಿಧಿಗಳು ಕೇವಲ ಭರವಸೆ ನೀಡುವುದಕ್ಕಿಂತ ಸರ್ಕಾರದ ಮಟ್ಟದಲ್ಲಿ ಪ್ರಸ್ತಾವನೆ ಸಲ್ಲಿಕೆ, ಜಾಗದ ಆಯ್ಕೆ, ಅನುದಾನದ ಲಭ್ಯತೆ ಹಾಗೂ ಕಾಮಗಾರಿ ಆರಂಭದ ಕುರಿತು ಸ್ಪಷ್ಟ ಮಾಹಿತಿ ನೀಡಬೇಕು ಎಂಬ ಆಗ್ರಹ ಸಮಾಜದವರಿಂದ ಕೇಳಿಬರುತ್ತಿದೆ.**

---

## ಪ್ರತಾಪ್ ಸಿಂಹ ವಿರುದ್ಧ ಕ್ರಮಕ್ಕೆ ದಲಿತ ಮುಖಂಡರು ಅಗ್ರಹ

**ಸತ್ಯಮಿಥ್ಯ ಸುದ್ದಿಮೂಲ ರೋಣ:**

ಹೋರಾಟದ ಸಂಕೇತವಾಗಿರುವ ನೀಲಿ ಶಾಲು ಮತ್ತು ಬಾವುಟವು ಮಾನವ ಸಂಬಂಧಗಳನ್ನು ಬೇಸಿಯುತ್ತವೆ, ಯಾವುದೇ ಕಾರಣಕ್ಕೂ ಜಾತಿ ಮತ್ತು ಧರ್ಮಗಳ ನಡುವೆ ಸಂಘರ್ಷ ಉಂಟು ಮಾಡುವುದಿಲ್ಲ ಎಂಬುದನ್ನು ಪ್ರತಾಪ ಸಿಂಹ ಅರಿತುಕೊಳ್ಳಬೇಕು ಎಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಸಂಜಯ ದೊಡ್ಡಮನಿ ಹೇಳಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಂಬೇಡ್ಕರ್ ಅವರು ಸಂವಿಧಾನದ ರಚನೆಯ ಮೂಲಕ ಎಲ್ಲ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಒದಗಿಸುವ ಕೆಲಸ ಮಾಡಿದ್ದಾರೆ, ಸಂವಿಧಾನವು ದೇಶದ ಎಲ್ಲ ನಾಗರಿಕರಿಗೆ ಸಮಾನ ಹಕ್ಕು ಮತ್ತು ಅವಕಾಶಗಳನ್ನು ನೀಡಿದೆ, ಇಂಥ ಸಂವಿಧಾನದ ಆಶಯಗಳಿಗೆ ವಿರುದ್ಧ ಮತ್ತು ಸಾಮಾಜಿಕ ವಿಭಜನೆ ಉಂಟು ಮಾಡುವ ಹೇಳಿಕೆಯನ್ನು ಪ್ರತಾಪ್ ಸಿಂಹ ನೀಡುತ್ತಿರುವುದು ದುರಕಷ್ಟಕರ ಎಂದರು.

ಸಾಮಾಜಿಕ ಸಾಮರಸ್ಯ ಕದಡುವ ಹೇಳಿಕೆಗಳನ್ನು ಪ್ರತಾಪ್ ಸಿಂಹ ಹಿಂಪಡೆಯಬೇಕು , ದಲಿತ ಸಮುದಾಯದ ಭಾವನೆಗಳಿಗೆ ಗೌರವ ನೀಡಬೇಕು, ಇಲ್ಲವಾದರೆ ಮುಂದಿನ ದಿನಗಳಲ್ಲಿ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು, ಈ ಸಂದರ್ಭದಲ್ಲಿ ದೇವೇಂದ್ರ ಕೊಳಪನ್ನವರ, ಎಲ್ಲಪ್ಪ ಮಾದರ,ಎಲ್ಲಪ್ಪ ಜೋಗಿನ, ಎಲ್ಲಪ್ಪ ಚಲವಾದಿ ದೇವಪ್ಪ ಕೊಳಪ್ಪನವರ, ಹನುಮಂತ ಹಳ್ಳಳ್ಳಿ ಸೇರಿದಂತೆ ಅನೇಕರು ಇದ್ದರು.



---

## ಕರ್ನಾಟಕ ಪಶ್ಚಿಮ ಪದವಿಧರ ಮತಕ್ಷೇತ್ರದ ಚುನಾವಣೆ 2026: ಸೆ.29ರಂದು ಅಧಿಸೂಚನೆ ಪ್ರಕಟ

**ಸತ್ಯಮಿಥ್ಯ ಸುದ್ದಿಮೂಲ ಗದಗ**



ಭಾರತ ಚುನಾವಣಾ ಆಯೋಗವು ಕರ್ನಾಟಕ ಪಶ್ಚಿಮ ಪದವಿಧರ ಮತಕ್ಷೇತ್ರದ ಚುನಾವಣೆ-2026 ಕುರಿತಂತೆ ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದ್ದು, ಸೆಪ್ಟೆಂಬರ್ 29ರಂದು ಚುನಾವಣಾ ಅಧಿಸೂಚನೆ ಹೊರಡಿಸಲಾಗುವುದು ಎಂದು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಕರ್ನಾಟಕ ಪಶ್ಚಿಮ ಪದವಿಧರ ಮತಕ್ಷೇತ್ರದ ಚುನಾವಣಾಧಿಕಾರಿ ಕೆ ಎಮ್ ಜಾನಕಿ ಅವರು ತಿಳಿಸಿದ್ದಾರೆ. ಚುನಾವಣಾ ವೇಳಾಪಟ್ಟಿಯಂತೆ ಸೆಪ್ಟೆಂಬರ್ 29ರಂದು ಅಧಿಸೂಚನೆ ಪ್ರಕಟವಾಗಲಿದ್ದು, ಅಕ್ಟೋಬರ್ 6ರಂದು ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ಅಕ್ಟೋಬರ್ 7ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಅಕ್ಟೋಬರ್ 9ರಂದು ಉಮೇದುವಾರಿಕೆಯನ್ನು ಹಿಂಪಡೆಯಲು ಕೊನೆಯ ದಿನವಾಗಿದೆ. ಅಕ್ಟೋಬರ್ 23ರಂದು ಮತದಾನ ನಡೆಯಲಿದ್ದು, ಬೆಳಿಗ್ಗೆ 8ರಿಂದ ಸಂಜೆ 4ರವರೆಗೆ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ. ಅಕ್ಟೋಬರ್ 27ರಂದು ಮತಗಳ ಎಣಿಕೆ ನಡೆಯಲಿದ್ದು, ಅಕ್ಟೋಬರ್ 31ರಂದು ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ.

ಚುನಾವಣಾ ಪ್ರಕ್ರಿಯೆಯನ್ನು ಸುಗಮವಾಗಿ ಹಾಗೂ ಶಾಂತಿಯುತವಾಗಿ ನಡೆಸಲು ಸಂಬಂಧಿಸಿದ ಸಹಾಯಕ ಚುನಾವಣಾಧಿಕಾರಿಗಳು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಸೂಚಿಸಲಾಗಿದೆ.

ಚುನಾವಣಾ ವ್ಯಾಪ್ತಿಯ ಜಿಲ್ಲೆಗಳಲ್ಲಿ ಚುನಾವಣಾ ನೀತಿ ಸಂಹಿತೆ ಸೇರಿದಂತೆ ಚುನಾವಣಾ ಆಯೋಗದ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗಿದ್ದು, ಪೊಲೀಸ್ ಇಲಾಖೆ ಹಾಗೂ ಇತರೆ ಸಂಬಂಧಿತ ಇಲಾಖೆಗಳು ಚುನಾವಣಾ ಪ್ರಕ್ರಿಯೆಗೆ ಅಗತ್ಯ ಸೂಕ್ತ ಕ್ರಮ ವಹಿಸಲು ತಿಳಿಸಲಾಗಿದೆ ಎಂದು ಕರ್ನಾಟಕ ಪಶ್ಚಿಮ ಪದವಿಧರ ಮತಕ್ಷೇತ್ರದ ಚುನಾವಣಾಧಿಕಾರಿ ಕೆ ಎಮ್ ಜಾನಕಿ ಅವರು ತಿಳಿಸಿದ್ದಾರೆ.

---

## ಪೌರ ಕಾರ್ಮಿಕರು ನಿಜವಾದ ಕಾಯಕಯೋಗಿಗಳು: ಅರುಣ ಕುಲಕರ್ಣಿ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**

ಮಳೆ, ಬಿಸಿಲು, ಚಳಿ ಎನ್ನದೆ ವರ್ಷದ ಹನ್ನೆರಡು ತಿಂಗಳೂ ಪಟ್ಟಣವನ್ನು ಸ್ವಚ್ಛವಾಗಿಡುವ ಪೌರ ಕಾರ್ಮಿಕರು ನಿಜವಾದ ಕಾಯಕಯೋಗಿಗಳು. ಅವರ ಸೇವೆಗೆ ಗೌರವ ಸಲ್ಲಿಸುವ ನಿಟ್ಟಿನಲ್ಲಿ ಪೌರ ಕಾರ್ಮಿಕರ ದಿನಾಚರಣೆ ಅರ್ಥಪೂರ್ಣವಾಗಿದೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣ ಪಂಚಾಯಿತಿಯಲ್ಲಿ ಬುಧವಾರ ನಡೆದ 15ನೇ ಪೌರ ಕಾರ್ಮಿಕರ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಪೌರ ಕಾರ್ಮಿಕರು ನಿಷ್ಠೆ ಹಾಗೂ ಪ್ರಾಮಾಣಿಕತೆಯಿಂದ ಕರ್ತವ್ಯ ನಿರ್ವಹಿಸುವುದರ ಜೊತೆಗೆ ತಮ್ಮ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಬೇಕು. ದುಶ್ಚಟಗಳಿಂದ ದೂರವಿದ್ದು, ಕುಟುಂಬದ ನಿರ್ವಹಣೆಯೊಂದಿಗೆ ಮಕ್ಕಳ ಉತ್ತಮ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದರು.

ಪೌರ ಕಾರ್ಮಿಕರ ಬೇಡಿಕೆಗಳಿಗೆ ಪಟ್ಟಣ ಪಂಚಾಯಿತಿ ನೌಕರ ವರ್ಗ ಸಕಾರಾತ್ಮಕವಾಗಿ ಸ್ಪಂದಿಸಬೇಕು. ವೇತನವನ್ನು ಸಕಾಲದಲ್ಲಿ ಪಾವತಿಸುವುದರ ಜತೆಗೆ, ಕೆಲಸಕ್ಕೆ ಅಗತ್ಯವಾದ ಕೈಗವಸು ಸೇರಿದಂತೆ ಸುರಕ್ಷತಾ ಪರಿಕರಗಳನ್ನು ಸಮಯಕ್ಕೆ ಸರಿಯಾಗಿ ಒದಗಿಸಬೇಕು. ಇದರಿಂದ ಕಾರ್ಮಿಕರ ಆರೋಗ್ಯದ ರಕ್ಷಣೆಯೊಂದಿಗೆ ಪಟ್ಟಣದ ಸ್ವಚ್ಛತೆ ಹಾಗೂ ಸೌಂದರ್ಯ ಕಾಪಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಲ್ಲೇಶ ಪಚ್ಚಿ ಮಾತನಾಡಿ, ಪೌರ ಕಾರ್ಮಿಕರು ತಮ್ಮ ದಿನಾಚರಣೆಯನ್ನು ಹಬ್ಬದಂತೆ ಆಚರಿಸಬೇಕು. ಕುಟುಂಬದ ಸದಸ್ಯರೊಂದಿಗೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಮೂಲಕ ಸಂಭ್ರಮಿಸಬೇಕು. ತಮ್ಮ ಸಮಸ್ಯೆಗಳನ್ನು ಪಂಚಾಯಿತಿ ಗಮನಕ್ಕೆ ತಂದರೆ ಸಾಧ್ಯವಿರುವ ಎಲ್ಲ ಸಹಕಾರ ನೀಡಲಾಗುವುದು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ ಸಮಾಜದಲ್ಲಿ ಗೌರವಾನ್ವಿತ ಸ್ಥಾನ ಪಡೆಯುವಂತೆ ಮಾಡಬೇಕು ಎಂದರು.

ಎಸ್‌ಬಿಐ ವ್ಯವಸ್ಥಾಪಕ ಮಾಲತೇಶ ಕದಂಬ ಮಾತನಾಡಿ, ಪೌರ ಕಾರ್ಮಿಕರು ಪಟ್ಟಣ ಪಂಚಾಯಿತಿ ಆವರಣದಲ್ಲಿರುವ ಎಸ್‌ಬಿಐನಲ್ಲಿ ಖಾತೆ ತೆರೆದು, ಬ್ಯಾಂಕಿನ ವಿವಿಧ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ಆರ್ಥಿಕವಾಗಿ ಸದೃಢರಾಗಬೇಕು ಎಂದರು.

ಪೌರ ಕಾರ್ಮಿಕರ ಸಂಘದ ಉಪಾಧ್ಯಕ್ಷ ಮಲ್ಲಿಕಾರ್ಜುನ ಹಿರೇವಡೆಯರ ಮಾತನಾಡಿ, "ನಮ್ಮ ಮಕ್ಕಳು ನಮ್ಮಂತೆಯೇ ಇದೇ ವೃತ್ತಿಯಲ್ಲಿ ಮುಂದುವರಿಯುವುದು ಬೇಡ. ಅವರಿಗೆ ಉತ್ತಮ ಭವಿಷ್ಯ ರೂಪಿಸಬೇಕು. ಅದಕ್ಕಾಗಿ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡೋಣ" ಎಂದರು.

ಸಂಘದ ಅಧ್ಯಕ್ಷ ನೀಲಪ್ಪ ಚಳ್ಳಮರದ ಅಧ್ಯಕ್ಷತೆ ವಹಿಸಿದ್ದರು. ಸಂಘದ ನಿರ್ದೇಶಕರಾದ ಮಲ್ಲಪ್ಪ ಸೀತಿಮನಿ, ಶಂಕ್ರಪ್ಪ ದೊಡ್ಡಣ್ಣವರ, ಎಂಜಿನಿಯರ್ ನಾಡಿಗೇರ ವೇದಿಕೆಯಲ್ಲಿದ್ದರು. ಶಿವಾನಂದ ಗೋಗೇರಿ ನಿರೂಪಿಸಿದರು. ಆರೀಫ್ ಮಿರ್ಜಾ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಗಣ್ಯರು ಹಾಗೂ ಪೌರ ಕಾರ್ಮಿಕರನ್ನು ಸನ್ಮಾನಿಸಲಾಯಿತು.



---

## ದಸರಾ ಸಿಎಂ ಕಪ್ ನೆಟ್‌ಬಾಲ್ ವಿಭಾಗಮಟ್ಟಕ್ಕೆ ಆಯ್ಕೆ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ:**

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾಮಟ್ಟದ ದಸರಾ ಸಿಎಂ ಕಪ್ ಕ್ರೀಡಾಕುಟದಲ್ಲಿ ಮೊದಲ ಸ್ಥನ ಪಡೆದು ಕೊಪ್ಪಳ ಜಿಲ್ಲಾ ನೆಟ್‌ಬಾಲ್ ಅಸೋಷಿಯೇಷನ್‌ನ ಮಹಿಳಾ ಮತ್ತು ಪುರುಷರ ತಂಡಗಳು ವಿಭಾಗಮಟ್ಟಕ್ಕೆ ಆಯ್ಕೆಯಾಗಿವೆ ಎಂದು ನೆಟ್‌ಬಾಲ್ ಅಸೊಸಿಯೇಷನ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ ತಿಳಿಸಿದ್ದಾರೆ.

ಕೊಪ್ಪಳದಲ್ಲಿ ಸೆ. 30 ರಂದು ನಡೆಯಲಿರುವ ವಿಭಾಗಮಟ್ಟದ ದಸರಾದಲ್ಲಿ ನಡೆಯುವ ನೆಟ್‌ಬಾಲ್ ಕ್ರೀಡೆಯಲ್ಲಿ ಇಲ್ಲಿನ ಜಿಲ್ಲಾ ನೆಟ್‌ಬಾಲ್ ಅಸೋಷಿಯೇಷನ್‌ನ ಅಬ್ದುಲ್ ರಜಾಕ್ ಟೇಲರ್ ನಾಯಕತ್ವದಲ್ಲಿ ಮಂಜುನಾಥ ಜಿ. ಗೊಂಡಬಾಳ, ಶಿವಕುಮಾರ ಹಟ್ಟಿ, ಮಂಜುನಾಥ ಚೌಡಕಿ ಕುಷ್ಟಗಿ, ಬಾಲಕೃಷ್ಣ ಹಲಗೇಕರ್, ಆಂಜನೇಯ, ಅಬುಬಕರ್, ಭಿಮೇಶ ಕುಡಗುಂಟಿ, ಮಹ್ಮದ್ ಆಫಾನ್ ಮೊಗಲ್, ಆದಿತ್ಯ ಬಡೆಘರ್, ಶಿವರಾಜ ಭೋವಿ, ರ್‍ಹಾನ್ ಹಾಗೂ ಮಹಿಳಾ ತಂಡದ ನಾಯಕತ್ವವನ್ನು ನೆಟ್‌ಬಾಲ್ ಅಂಡರ್-19 ನ್ಯಾಷನಲ್ ಗೋಲ್ಡ್ ಮೆಡಲಿಷ್ಟ್ ಸಾಹಿತ್ಯ ಎಂ. ಗೊಂಡಬಾಳ ವಹಿಸಿದ್ದು, ಅದಿತಿ ನಾಡಗೌಡ, ಸೃಷ್ಟಿ ಗುದ್ಯಾಪಗೋಳ, ಸೋನಾಕ್ಷಿ ಅಳ್ಳೊಳ್ಳಕರ್, ಅಕ್ಷರ ಎಂ. ಗೊಂಡಬಾಳ, ರಿತುಶ್ರೀ ಮೋತರ್, ಸಿಮ್ರಾ ಮುಲ್ಲಾ, ಗೌರಿ ಸಟ್ಟೆಗೇರಿ, ಸೀತಾ ಗೌರವ, ಶಮಾ ಬಿಸರಳ್ಳಿ, ಆಸ್ಫಿಯಾ ಬಡೇಘರ್, ಆದಿತಿ ಗವಡೆ ತಂಡದಲ್ಲಿದ್ದಾರೆ.

ಸದರಿ ತಂಡಗಳು ವಿಭಾಗಮಟ್ಟದಲ್ಲಿ ಗೆದ್ದು ರಾಜ್ಯಮಟ್ಟದಲ್ಲಿ ಉತ್ತಮ ಸಾಧನೆ ಮಡಲಿ ಎಂದು ಸಂಸದರು, ಅಥ್ಲೆಟಿಕ್ಸ್ ಅಸೋಸಿಯೇಷನ್ ಅಧ್ಯಕ್ಷ ಕೆ. ರಾಜಶೇಖರ ಹಿಟ್ನಾಳ, ಶಾಸಕ ಕೆ. ರಾಘವೇಂದ್ರ ಹಿಟ್ನಾಳ ಶುಭಹಾರೈಸಿದ್ದಾರೆ.




---

## ಸಮಾಜಮುಖಿ ಸೇವೆಗೆ ನಾಗರಾಜ ಕ್ಷತ್ರಿ ಅವರಿಗೆ ಆತ್ಮೀಯ ಸನ್ಮಾನ

**ಸತ್ಯಮಿಥ್ಯ ಸುದ್ದಿಮೂಲ ಗದಗ:**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ರಿ.), ಬಿ.ಸಿ. ಟ್ರಸ್ಟ್ ವತಿಯಿಂದ ಗದಗ ತಾಲೂಕಿನಲ್ಲಿ ಪ್ರಗತಿಬಂಧು ಸ್ವಸಹಾಯ ಸಂಘಗಳ ಒಕ್ಕೂಟದ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಮಾಜಮುಖಿ ಸೇವೆಯಲ್ಲಿ ತೊಡಗಿಸಿಕೊಂಡಿರುವ ನಾಗರಾಜ ಕ್ಷತ್ರಿ ಅವರನ್ನು ಸಂಘದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಸಮಾಜದ ಅಭಿವೃದ್ಧಿ, ಜನರಲ್ಲಿ ಸ್ವಾವಲಂಬನೆ ಹಾಗೂ ಸಂಘಟನಾ ಮನೋಭಾವ ಬೆಳೆಸುವಲ್ಲಿ ಸ್ವಸಹಾಯ ಸಂಘಗಳು ಮಹತ್ವದ ಪಾತ್ರ ವಹಿಸುತ್ತಿವೆ. ಇಂತಹ ಸಮಾಜಮುಖಿ ಕಾರ್ಯಗಳಿಗೆ ಸಹಕಾರ ನೀಡುತ್ತಿರುವ ನಾಗರಾಜ ಕ್ಷತ್ರಿ ಅವರ ಸೇವೆಯನ್ನು ಗುರುತಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು, ಸದಸ್ಯರು ಹಾಗೂ ಗಣ್ಯರು ಉಪಸ್ಥಿತರಿದ್ದು, ನಾಗರಾಜ ಕ್ಷತ್ರಿ ಅವರಿಗೆ ಶುಭ ಹಾರೈಸಿದರು. ಕಾರ್ಯಕ್ರಮವು ಆತ್ಮೀಯ ಹಾಗೂ ಅರ್ಥಪೂರ್ಣ ವಾತಾವರಣದಲ್ಲಿ ನಡೆಯಿತು.



# ಹೈನುಗಾರಿಕೆ ರೈತರ ಬದುಕಿನ ಜೀವಾಳವಾಗಿದೆ: ವೀರಣ್ಣ ಕೌಜಲಗಿ

## ಸಂಘಕ್ಕೆ ಹೆಚ್ಚು ಹಾಲು ನೀಡಿದ ಸದಸ್ಯರಿಗೆ ಬಹುಮಾನ ವಿತರಣೆ ಸಾಧಕರಿಗೆ, ಗಣ್ಯರಿಗೆ ಸನ್ಮಾನ

**ಸತ್ಯಮಿಥ್ಯ ಸುದ್ದಿಮೂಲ ಬೆಟಗೇರಿ:**
ಸ್ಥಳೀಯ ರೈತರು ನಿತ್ಯದ ಕೃಷಿ ಚಟುವಟಿಕೆಗಳ ಜೋತೆಗೆ ಹೈನುಗಾರಿಕೆ ಅಳವಡಿಸಿಕೊಂಡುಆರ್ಥಿಕವಾಗಿಸಬಲರಾಗಬೇಕು.ಕೆಎಂಎಫ್‌ನಿಂದ ಹೈನುಗಾರಿಕೆ ಅಭಿವೃದ್ಧಿಗಾಗಿ ಹತ್ತು ಹಲವಾರು ಸಹಾಯ, ಸೌಲಭ್ಯಗಳಿವೆ. ರೈತರು ಇವುಗಳ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಬೆಳಗಾವಿ ಜಿಲ್ಲಾ ಹಾಲು ಒಕ್ಕೂಟದ ಗೋಕಾಕ ಘಟಕ ಉಪಕೇಂದ್ರ ಅಧಿಕಾರಿ ವೀರಣ್ಣ ಕೌಜಲಗಿ ಹೇಳಿದರು.

ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮದ ಹಾಲು ಉತ್ಪಾದಕರ ಸಹಕಾರಿ ಸಂಘದಲ್ಲಿ ಸೆ.23ರಂದು ನಡೆದ 2025–26ನೇ ಸಾಲಿನ ವಾರ್ಷಿಕ ಸರ್ವಸಾಧಾರಣ ಮಹಾಸಭೆಯಲ್ಲಿ ಮುಖ್ಯಅತಿಥಿಯಾಗಿ ಮಾತನಾಡಿ, ಹೈನುಗಾರಿಕೆ ರೈತರ ಬದುಕಿನ ಜೀವಾಳವಾಗಿದೆ. ಬೆಳಗಾವಿ ಹಾಲು ಒಕ್ಕೂಟದಿಂದ ಹೈನುಗಾರಿಕೆ ಅಭಿವೃದ್ಧಿಗಾಗಿ ರೈತರಿಗೆ ದೊರಕುವ ವಿವಿಧ ಸಹಾಯ, ಸೌಲಭ್ಯಗಳ ಕುರಿತು ತಿಳಿಸಿದರು.

ಸಂಘದ ಮುಖ್ಯಕಾರ್ಯನಿರ್ವಾಹಕ ನಿಂಗಪ್ಪ ನೀಲಣ್ಣವರ ವಾರ್ಷಿಕ ವರದಿ ಮಂಡಿಸಿ ಸಂಘವು ಸನ್ 2025–26ನೇ ಸಾಲಿನಲ್ಲಿ 29,90,611/–ರೂ.ಗಳ ನಿವ್ವಳ ಲಾಭ ಗಳಿಸಿದೆ. ಸಂಘದ ಶೇರ ಸದಸ್ಯರಿಗೆ ಶೇ20ರಷ್ಟು 43,600/–ರೂಗಳ ಡಿವ್ಹಿಡೆಂಡ್, ಶೇ65ರಷ್ಟು ಒಟ್ಟು 14,00,424/–ರೂ.ಗಳ ಬೋನಸ್ ಸದಸ್ಯರಿಗೆ ವಿತರಿಸಲಾಗುವದು ಎಂದರು.

ಸ್ಥಳೀಯ ಸಂಘದ ಅಧ್ಯಕ್ಷ ಸಿದ್ಧೇಶ್ವರ ಕುರಬೇಟ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಂಘದ ಶೇರ ಸದಸ್ಯರು, ಗ್ರಾಹಕರು, ಗ್ರಾಮದ ಪ್ರಮುಖ ನಾಗರಿಕರ ಜೋತೆ ಆಡಳಿತ ಮಂಡಳಿ ಅಧ್ಯಕ್ಷ ಮತ್ತು ಸದಸ್ಯರು ಸಂಘದ ಸಮಗ್ರ ಪ್ರಗತಿಯ ಕುರಿತು ಹಲವಾರು ವಿಷಯಗಳನ್ನು ಈ ವೇಳೆ ಚರ್ಚಿಸಿದ ಬಳಿಕ ಗಣ್ಯರು, ಅತಿಥಿಗಳನ್ನು ಈ ವೇಳೆ ಶಾಲು ಹೊದಿಸಿ ಸನ್ಮಾನಿಸಲಾಯಿತು.



**ಬಹುಮಾನ ವಿತರಣೆ:** ಸನ್ 2025–26ನೇ ಸಾಲಿನಲ್ಲಿ ಬೆಟಗೇರಿ ಗ್ರಾಮದ ಹಾಲು ಉತ್ಪಾದಕರ ಸಹಕಾರಿ ಸಂಘಕ್ಕೆ ಆಕಳು ಮತ್ತು ಎಮ್ಮೆ ಹಾಲು ವಿಭಾಗದಲ್ಲಿ ಅತಿ ಹೆಚ್ಚು ಹಾಲು ನೀಡಿದ ಸಂಘದ ಸದಸ್ಯರಿಗೆ ಉಭಯ ವಿಭಾಗದಲ್ಲಿ ಪ್ರಥಮ, ದ್ವಿತಿಯ, ತೃತೀಯ ಸ್ಥಾನಗಳಿಗೆ ಹಾಗೂ 2 ಸಾವಿರ ರೂಪಾಯಿಕ್ಕಿಂತ ಹೆಚ್ಚು ಭೋನಸ್ ಹಣ ಪಡೆದ ಸಂಘದ ಸದಸ್ಯರಿಗೆ ಸ್ಥಳೀಯ ಹಾಲು ಉತ್ಪಾದಕರ ಸಹಕಾರಿ ಸಂಘದ ವತಿಯಿಂದ ಹೈನುಗಾರಿಕೆ ಮತ್ತು ಗೃಹೋಪಯೋಗಿ ಉಪಕರಣಗಳನ್ನು ಬಹುಮಾನ ರೂಪದಲ್ಲಿ ನೀಡಿದರು. ಗಣ್ಯರು, ಸಾಧಕರನ್ನು ಈ ವೇಳೆ ಸನ್ಮಾನಿಸಿದರು.

ಗೋಕಾಕ ಘಟಕ ಉಪಕೇಂದ್ರದ ವಿಸ್ತರಣಾಧಿಕಾರಿ ಗೋಪಾಲ ಭಂಡಾರಿ, ಡಾ. ನಿಂಗಪ್ಪ ಸವದತ್ತಿ, ಹನುಮಂತಗೌಡ ಪಾಟೀಲ, ಶ್ರೀಧರ ದೇಯಣ್ಣವರ, ಅಡಿವೆಪ್ಪ ಮುರಗೋಡ, ಅಶೋಕ ಕೋಣಿ, ಲಖನ ಚಂದರಗಿ, ಈರಣ್ಣ ಬಳಿಗಾರ, ರಾಮಣ್ಣ ಮುಧೋಳ, ಮಾಯಪ್ಪ ಬಾಣಸಿ, ಈಶ್ವರ ಮುಧೋಳ, ವಿಜಯ ಮಠದ, ಯಲ್ಲಾಲಿಂಗ ದೇಯಣ್ಣವರ, ಮಲ್ಲಿಕಾರ್ಜುನ ಪೇದನ್ನವರ, ಮಹಾದೇವ ಕಂಬಿ, ಅರ್ಜುನ ಬ್ಯಾಗಿ, ಶಿವಪ್ಪ ಬಳಿಗಾರ, ಸತ್ತೆಪ್ಪ ಹೊರಟ್ಟಿ, ಮಹಾದೇವ ಮಾಳೇದ, ಸುರೇಶ ತಳವಾರ, ಗಂಗವ್ವ ತೆ–ಲೀಟಗಿ, ಬಸವ್ವ ಕೋಣಿ, ಸಹಕಾರಿ ಧುರೀಣರು, ಗಣ್ಯರು, ಸ್ಥಳೀಯ ಹಾಲು ಉತ್ಪಾದಕರ ಸಹಕಾರಿ ಸಂಘದ ಆಡಳಿತ ಮಂಡಳಿ ಸದಸ್ಯರು, ಸಿಬ್ಬಂದಿ, ಶೇರ ಸದಸ್ಯರು, ಗ್ರಾಹಕರು, ಇತರರು ಇದ್ದರು.

# ಸಮಾಜದಲ್ಲಿ ಮಕ್ಕಳನ್ನು ಸುರಕ್ಷಿತವಾಗಿಡುವುದು, ರಕ್ಷಿಸುವುದು ಶಿಕ್ಷಕರ ಮೂಲಭೂತ ಕರ್ತವ್ಯ: ಎಡಿಸಿ ಸಿದ್ರಾಮೇಶ್ವರ ಸಲಹೆ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ :**
ಮಕ್ಕಳ ಮೇಲೆ ಶಿಕ್ಷಕರ ಪ್ರಭಾವ ಹೆಚ್ಚಾಗಿರುತ್ತದೆ. ಚಿಕ್ಕಮಕ್ಕಳು ಪೋಷಕರಿಗಿಂತಹೆಚ್ಚಾಗಿತಮ್ಮಶಿಕ್ಷಕರಮಾತನ್ನುಕೇಳುತ್ತಾರೆ. ಸಮಾಜದಲ್ಲಿ ಮಕ್ಕಳನ್ನು ಸುರಕ್ಷಿತವಾಗಿಡುವುದು ಮತ್ತು ರಕ್ಷಿಸುವುದು ಶಿಕ್ಷಕರ ಮೂಲಭೂತ ಕರ್ತವ್ಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯುನಿಸೆಫ್ –ಮಕ್ಕಳ ರಕ್ಷಣಾ ಯೋಜನೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕೊಪ್ಪಳ ಇವರ ಸಹಯೋಗದೊಂದಿಗೆ ಬುಧವಾರದಂದು ಜಿಲ್ಲಾ ಪಂಚಾಯತಿಯ ಜೆ.ಎಚ್.ಪಟೇಲ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ "ಮಕ್ಕಳ ಹಕ್ಕುಗಳು ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016 ಪರಿಷ್ಕರಣೆ–2023 ಹಾಗೂ ಬಾಲ್ಯ ವಿವಾಹ ನಿಷೇಧ ಕಾಯ್ದೆ–2006 ಕರ್ನಾಟಕ ತಿದ್ದುಪಡಿ 2016ರ ಕುರಿತು ತರಬೇತುದಾರರ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಭಾರತೀಯ ನಾಗರಿಕ ಸಂಹಿತೆ ಹಾಗೂ ಪೋ–ಕ್ಸೋ ಕಾಯ್ದೆಯಡಿ ಅಪರಾಧವನ್ನು ನೋಡಿಯೂ ಸುಮ್ಮನಿರುವುದು ಅಥವಾ ನಿರ್ಲಕ್ಷಿಸುವುದು ಕೂಡ ಅಪರಾಧವೇ ಆಗುತ್ತದೆ. ಆದ್ದರಿಂದ ಯಾವುದೇ ಸಣ್ಣ ಘಟನೆಯನ್ನೂ ನಿರ್ಲಕ್ಷಿಸಬಾರದು. ಮಕ್ಕಳ ಮೇಲಿನ ದೌರ್ಜನ್ಯ, ಕಿರುಕುಳ ಪರಿಸ್ಥಿತಿ ಜರುಗದಂತೆ, ಮರುಕಳಿಸದಂತೆ ಶಿಕ್ಷಕರು ಜಾಗೃತರಾಗಿರಬೇಕು. ಶಿಕ್ಷಕರು ಮಕ್ಕಳಿಗೆ ದಾರಿದೀಪವಾಗಬೇಕು. ತಮ್ಮ ಶಾಲಾ ಮಕ್ಕಳನ್ನು ತಮ್ಮ ಮಕ್ಕಳಂತೆ ಕಾಣಬೇಕು. ಅವರ ರಕ್ಷಣೆಗೆ, ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಅವರು ಹೇಳಿದರು.

ಇಂದಿನ ತರಬೇತಿಯಲ್ಲಿ ಪಡೆದ ಮಾಹಿತಿಯನ್ನು ಶಿಕ್ಷಕರು ನಿಗದಿತ ಸಮಯದಲ್ಲಿ ತಮ್ಮ ತಮ್ಮ ಶಾಲೆಗಳಲ್ಲಿ ಇತರ ಶಿಕ್ಷಕರೊಂದಿಗೆ ಹಂಚಿಕೊಳ್ಳಬೇಕು. ಈ ಕಾರ್ಯಕ್ರಮವು ಕೇವಲ ಪಂಚವರ್ಷ ಯೋಜನೆಯಾಗದೆ ತಕ್ಷಣವೇ ಅನುಷ್ಠಾನಗೊಳ್ಳಬೇಕು. ಈ ತರಬೇತಿ ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಲು ಶಿಕ್ಷಕರ ಸಕ್ರಿಯ ಭಾಗವಹಿಸುವಿಕೆ ಮತ್ತು ಸಲಹೆ–ಸೂಚನೆಗಳು ಅತ್ಯಗತ್ಯ ಎಂದು ಅವರು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ದರಗದ ಅವರು ಮಾತನಾಡಿ, ಶಾಲೆ ಹಾಗೂ ಮನೆಗಳಲ್ಲಿ ಮಕ್ಕಳ ಸುರಕ್ಷತೆ ಮತ್ತು ಅವರ ಹಕ್ಕುಗಳ ರಕ್ಷಣೆ ಇಂದು ಅತ್ಯಂತ ತುರ್ತಾಗಿ ಆಗಬೇಕಿರುವ ಕಾರ್ಯವಾಗಿದೆ. ಈ ನಿಟ್ಟಿನಲ್ಲಿ ಬಾಲ್ಯವಿವಾಹ ತಡೆ ಮತ್ತು ಪೋಕ್ಸೋ ಕಾಯ್ದೆಯ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮ ಇದಾಗಿದೆ. ಪೋಕ್ಸೋ ಪ್ರಕರಣಗಳಲ್ಲಿ ಹೆಚ್ಚಿನ ಅಪರಾಧಿಗಳು ಹತ್ತಿರದವರು, ಕುಟುಂಬದವರು ಹಾಗೂ ಪರಿಚಯಸ್ಥರೇ ಆಗಿರುತ್ತಾರೆ. ನಮ್ಮ ಮಕ್ಕಳ ಸುರಕ್ಷತೆಗಾಗಿ ನಾವು ಚಿಂತಿಸುವಂತಾಗಿದೆ ಮತ್ತು ಇಂತಹ ಪ್ರಕರಣಗಳು ಮಕ್ಕಳ ಮಾನಸಿಕ ಸ್ಥಿತಿಯ ಮೇಲೆ ಗಂಭೀರ ಪರಿಣಾಮ ಬೀರುತ್ತವೆ ಎಂದು ಕಳವಳ ವ್ಯಕ್ತಪಡಿಸಿದರು.

ಬಾಲ್ಯವಿವಾಹ ನಿಷೇಧ ಕಾಯ್ದೆ 1929ರಲ್ಲೇ ಜಾರಿಗೆ ಬಂದಿದ್ದು, ಈ ಕಾಯ್ದೆಯಲ್ಲಿ 1978ರಲ್ಲಿ ತಿದ್ದುಪಡಿ ತರಲಾಯಿತು. ಪ್ರಸ್ತುತ ಹೆಣ್ಣುಮಕ್ಕಳಿಗೆ 18 ವರ್ಷ ಹಾಗೂ ಗಂಡುಮಕ್ಕಳಿಗೆ 21 ವರ್ಷ ಕಡ್ಡಾಯಗೊಳಿಸಲಾಗಿದೆ. ಇದನ್ನು ಉಲ್ಲಂಘಿಸಿದರೆ 2 ವರ್ಷಗಳವರೆಗೆ ಕಠಿಣ ಜೈಲು ಶಿಕ್ಷೆ ಹಾಗೂ 2 ಲಕ್ಷದವರೆಗೆ ದಂಡ ವಿಧಿಸಲಾಗುತ್ತದೆ. ಪೋ–ಕ್ಸೋ ಕಾಯ್ದೆ (2012) ಪ್ರಕಾರ ಮಕ್ಕಳ ವಿರುದ್ಧ ನಡೆಯುವ ಲೈಂಗಿಕ ದೌರ್ಜನ್ಯ, ಕಿರುಕುಳ ಹಾಗೂ ಅಶ್ಲೀಲತೆಗೆ ಮಕ್ಕಳನ್ನು ಬಳಸಿಕೊಳ್ಳುವುದನ್ನು ತಡೆಯಲು ಈ ಕಾಯ್ದೆ ರೂಪಿಸಲಾಗಿದೆ. ಇದು ಲೈಂಗಿಕ ಸ್ಪರ್ಶ ಮಾತ್ರವಲ್ಲದೆ, ಲೈಂಗಿಕ ಕಿರುಕುಳ, ಅಭದ್ರತೆಯ ಭಾವನೆ ಮೂಡಿಸುವುದು ಹಾಗೂ ಅಶ್ಲೀಲ ಚಿತ್ರಗಳನ್ನು ತೋರಿಸುವುದನ್ನೂ ಅಪರಾಧವೆಂದು ಪರಿಗಣಿಸುತ್ತದೆ. ಈ ಕಾಯ್ದೆಯಡಿ ಪ್ರಕರಣದ ತೀವ್ರತೆಗೆ ಅನುಗುಣವಾಗಿ 10 ವರ್ಷದಿಂದ 20 ವರ್ಷಗಳವರೆಗೆ ಕಠಿಣ ಜೈಲು ಶಿಕ್ಷೆ ಅಥವಾ ಜೀವಾವಧಿ ಶಿಕ್ಷೆಯನ್ನು ವಿಧಿಸಬಹುದಾಗಿದೆ ಎಂದು ಕಾನೂನಿನ ಬಗ್ಗೆ ಮಾಹಿತಿ ನೀಡಿದರು.

ಶಾಲೆಗೆ ವಿದ್ಯಾರ್ಥಿಗಳು 2–3 ದಿನ ಸತತವಾಗಿ ಗೈರುಹಾಜರಾದರೆ, ಶಿಕ್ಷಕರು ತಕ್ಷಣವೇ ಕಾರಣ ವಿಚಾರಿಸಬೇಕು. ಇದರಿಂದ ಬಾಲ್ಯವಿವಾಹ ಹಾಗೂ ಮಕ್ಕಳನ್ನು ಕೆಲಸಕ್ಕೆ ಕಳುಹಿಸುವುದನ್ನು, ಬಾಲಕಾರ್ಮಿಕ ಪದ್ಧತಿಯನ್ನು ತಡೆಯಬಹುದು. ಮಕ್ಕಳ ಒಳ್ಳೆಯ ಭವಿಷ್ಯಕ್ಕಾಗಿ, ಸದುದ್ದೇಶದಿಂದ ಮಾಡುವ ಕೆಲಸಗಳಿಗೆ ಶಿಕ್ಷಕರು ಅಂಜುವ ಅಗತ್ಯವಿಲ್ಲ. ಮಕ್ಕಳ ಸುರಕ್ಷತೆ ಪ್ರತಿಯೊಬ್ಬ ಪೋಷಕರು, ಶಿಕ್ಷಕರು ಹಾಗೂ ಸಮಾಜದ ಜವಾಬ್ದಾರಿಯಾಗಿದ್ದು, ಎಲ್ಲರೂ ಜಾಗೃತಿಯಿಂದ ಕಾರ್ಯನಿರ್ವಹಿಸಬೇಕೆಂದು ಅವರು ಕರೆ ನೀಡಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್‌ಕುಮಾರ್ ಎನ್. ಮಾತನಾಡಿ, ಮಕ್ಕಳ ಸಂರಕ್ಷಣೆ ಎಲ್ಲರ ಹೊಣೆ. ಶಾಲಾ ಶಿಕ್ಷಣ ಇಲಾಖೆಯ ಮುಖ್ಯ ಧ್ಯೇಯವಾಕ್ಯವು 'ಮಕ್ಕಳ ಶಿಕ್ಷಣ ಮತ್ತು ಸಂರಕ್ಷಣೆ' ಆಗಿದೆ. ಶಿಕ್ಷಕರು ಹಾಗೂ ಇಲಾಖೆಯ ಅಧಿಕಾರಿಗಳು ಮಕ್ಕಳ ಹಕ್ಕುಗಳ ರಕ್ಷಣೆ ಮಾಡುವಲ್ಲಿ ಪ್ರಮುಖ ಹೊಣೆಗಾರಿಕೆ ಹೊಂದಿದ್ದಾರೆ. ಶಾಲಾ ಆವರಣದಲ್ಲಿ ಅಥವಾ ಸುತ್ತಮುತ್ತ ಮಕ್ಕಳ ವಿರುದ್ಧ ಯಾವುದೇ ರೀತಿಯ ಲೈಂಗಿಕ ದೌರ್ಜನ್ಯ, ಕಿರುಕುಳ ಅಥವಾ ಬಾಲ್ಯವಿವಾಹದಂತಹ ಅನ್ಯಾಯಗಳು ನಡೆಯುತ್ತಿರುವುದು ಕಂಡುಬಂದರೆ, ಅದನ್ನು ತಕ್ಷಣವೇ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸುವುದು ಕಡ್ಡಾಯವಾಗಿದೆ. ಇದು ಕೇವಲ ನೈತಿಕ ಜವಾಬ್ದಾರಿಯಷ್ಟೇ ಅಲ್ಲ, ಕಾನೂನಿನ ಸೆಕ್ಷನ್ 16ರ ಅಡಿಯಲ್ಲಿ ಕಡ್ಡಾಯ ನಿಯಮವಾಗಿದೆ. ಮಕ್ಕಳ ಮೇಲಿನ ದೌರ್ಜನ್ಯ ಅಥವಾ ಅಪರಾಧಗಳನ್ನು ಮುಚ್ಚಿಡಲು ಯತ್ನಿಸಿದರೆ ಅಥವಾ ವರದಿ ಮಾಡದಿದ್ದರೆ ಅಂತಹ ಸಿಬ್ಬಂದಿ/ಅಧಿಕಾರಿಗಳ ವಿರುದ್ಧವೂ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಿದೆ. ಸಮಾಜದಲ್ಲಿ ಇಂತಹ ಅಪರಾಧಗಳನ್ನು ಸಂಪೂರ್ಣವಾಗಿ ತಡೆಗಟ್ಟಲು ಎಲ್ಲರೂ ಪ್ರಾಮಾಣಿಕವಾಗಿ ಶ್ರಮಿಸಬೇಕು ಮತ್ತು ಅರಿವು ಮೂಡಿಸುವ ಮೂಲಕ ಮಕ್ಕಳ ಸುರಕ್ಷತೆಯನ್ನು ಕಾಯ್ದುಕೊಳ್ಳಬೇಕು ಎಂದು ಹೇಳಿದರು.

ಯುನಿಸೆಫ್–ಮಕ್ಕಳ ರಕ್ಷಣಾ ಯೋಜನೆಯ ವಿಭಾಗೀಯ ಸಂಯೋಜಕರಾದ ಡಾ.ಕೆ.ರಾಘವೇಂದ್ರ ಭಟ್, ವ್ಯವಸ್ಥಾಪಕರಾದ ಹರೀಶ ಜೋಗಿ ಅವರು ಬಾಲ್ಯ ವಿವಾಹ, ಪೋಕ್ಸೋ ಕಾಯ್ದೆ, ಮಕ್ಕಳ ಹಕ್ಕುಗಳ ಕುರಿತು ವಿಶೇಷ ತರಬೇತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿಂಧು ಅಂಗಡಿ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಗವಿಸಿದ್ದಪ್ಪ ಹೊಸಮನಿ, ಬೆಂಗಳೂರಿನ ಚೈಲ್ಡ್ ರೈಟ್ಸ್ ಟ್ರಸ್ಟ್ನ ಸತೀಶ್ ಜಿ., ಸೇರಿದಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ, ಜಿಲ್ಲೆಯ ಶಿಕ್ಷಕರು, ಇತರೆ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕ್ರೀಡಾ ಮನೋಭಾವ ಬೆಳೆಸಿಕೊಳ್ಳಿ: ಮುಕುಲ್ ಜೈನ

**ಸತ್ಯಮಿಥ್ಯ ಸುದ್ದಿಮೂಲ ಗದಗ :**
ಕ್ರೀಡಾಪಟುಗಳು ಕ್ರೀಡಾ ಮನೋಭಾವ ಬೆಳೆಸಿಕೊಂಡು ಉತ್ಸಾಹದಿಂದ ದಸರಾ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳಬೇಕೆಂದು ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್ ತಿಳಿಸಿದರು.

ಗದಗ ಜಿಲ್ಲಾಡಳಿತ. ಜಿಲ್ಲಾ ಪಂಚಾಯತ. ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಬುಧವಾರ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ದಸರಾ ಕ್ರೀಡಾಕೂಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಪಟುಗಳುಗಳು ಪಾಲ್ಗೊಂಡು ಗದಗ ಜಿಲ್ಲೆಗೆ ಕೀರ್ತಿ ತರಬೇಕೆಂದರು. ಕ್ರೀಡೆಯಲ್ಲಿ ಸೋಲು–ಗೆಲುವು ಮುಖ್ಯವಲ್ಲ. ಕ್ರೀಡಾ ಸ್ಪೂರ್ತಿಯಿಂದ ಹಾಗೂ ಹುಮ್ಮಸ್ಸಿನಿಂದ ಭಾಗವಹಿಸುವುದು ಅತ್ಯಂತ ಮುಖ್ಯ. ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಪಟುಗಳು ದಸರಾ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳಬೇಕೆಂದು ಸಲಹೆ ಮಾಡಿದರು.

ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಅವರು ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ ಪ್ರತಿ ವರ್ಷ ದಸರಾ ಕ್ರೀಡಾಕೂಟಗಳನ್ನು ಆಯೋಜನೆ ಮಾಡಲಾಗುತ್ತದೆ. ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಗಳು ಸೆಪ್ಟೆಂಬರ್ 23 ಮತ್ತು 24 ರಂದು ಎರಡು ದಿನಗಳ ಕಾಲ ನಡೆಯುತ್ತಿವೆ. ರಾಜ್ಯದಲ್ಲಿ ಬೆಂಗಳೂರನ್ನು ಹೊರತುಪಡಿಸಿದರೆ ಗದಗ ಜಿಲ್ಲೆಯು ಹೆಚ್ಚಿನ ಕ್ರೀಡಾ ಸೌಲಭ್ಯಗಳನ್ನು ಹೊಂದಿರುವಂತಹ ಜಿಲ್ಲೆಯಾಗಿದೆ ಎಂಬುದು ಸಂತಸದ ವಿಷಯವಾಗಿದೆ. ಜಿಲ್ಲೆಯ ಕ್ರೀಡಾಪಟುಗಳು ವಿಭಾಗ ಮಟ್ಟದಲ್ಲಿ ಹಾಗೂ ರಾಜ್ಯ ಮಟ್ಟದಲ್ಲಿ ಭಾಗವಹಿಸಿ ಗದಗ ಜಿಲ್ಲೆಯ ಕೀರ್ತಿ ಹೆಚ್ಚಿಸಬೇಕೆಂದರು.

ಕಾರ್ಯಕ್ರಮದಲ್ಲಿ ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಯೋಗಗುರು ಕೆ.ಎಸ್.ಪಲ್ಲೇದ, ಶ್ರೀಮತಿ ಗಾಯತ್ರಿ, ಪಿ.ಕೆ.ಅವರಡ್ಡಿ, ಎಂ.ವಿ.ಪಾಟೀಲ, ಎಲ್.ಡಿ.ಪಾಟೀಲ, ವೈ. ಕೆ.ಚೌಡಾಪುರ , ಜಿಲ್ಲಾ ಹಾಗೂ ತಾಲೂಕಾ ದೈಹಿಕ ಶಿಕ್ಷಣಾಧಿಕಾರಿಗಳು , ಕ್ರೀಡಾ ಅಸೋಸಿಯೇಶ್‌ನದ ಅಧ್ಯಕ್ಷರು, ಕ್ರೀಡಾಪಟುಗಳು , ಹಾಜರಿದ್ದರು.

ವೆಂಕಟೇಶ ಅಲ್ಕೋಡ ರಾಷ್ಟ್ರೀಯ ಗೀತೆ ಹಾಗೂ ನಾಡಗೀತೆ ಪ್ರಸ್ತುತಪಡಿಸಿದರು. ಎಂ.ಎಸ್.ಕುಚಬಾಳ ಕಾರ್ಯಕ್ರಮ ನಿರೂಪಿಸಿದರು. ಚಂದ್ರಶೇಖರ ಮೇಲಿನಮನಿ ವಂದಿಸಿದರು.



# ಬಂಟಿಂಗ್, ಬ್ಯಾನರ್ ತೆರವಿಗೆ ಡಿಸಿ ಆದೇಶ

**ಹಾವೇರಿ:** ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರದ ಚುನಾವಣೆ ಘೋಷಣೆಯಾದ ಹಿನ್ನೆಲೆಯಲ್ಲಿ ಇಂದಿನಿಂದಲೇ ಜಿಲ್ಲೆಯಾದ್ಯಂತ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ರಾಜಕೀಯ ಪಕ್ಷಗಳ ಮುಖಂಡರ ಭಾವಚಿತ್ರವಿರುವ ಬಂಟಿಂಗ್, ಬ್ಯಾನರ್, ಪೋಸ್ಟರ್ ತೆರವುಗೊಳಿಸಿ, ಗೋಡೆಬರಹ ಮುಚ್ಚಿಡುವ ಕಾರ್ಯವನ್ನು 24 ಗಂಟೆಯೊಳಗೆ ಕೈಗೊಂಡು ಜಿಲ್ಲಾಡಳಿತಕ್ಕೆ ವರದಿ ನೀಡುವಂತೆ ತಹಶೀಲ್ದಾರ, ಪೌರಾಯುಕ್ತರು, ತಾ.ಪಂ.ಕಾರ್ಯನಿರ್ವಾಹಕರಿಗಳಿಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಆದೇಶ ಹೊರಡಿಸಿದ್ದಾರೆ.

# ಮಂಜುನಾಥ ಸೊಸಾಯಿಟಿಗೆ 91 ಲಕ್ಷ ಲಾಭ: ಅಧ್ಯಕ್ಷ ಸಂಗಪ್ಪ ನಿಡಗುಂದಿ

**ಸತ್ಯಮಿಥ್ಯ ಸುದ್ದಿಮೂಲ ಮೂಡಲಗಿ :**
2025–26 ಸಾಲಿನಲ್ಲಿ ಶ್ರೀ ಮಂಜುನಾಥ ಅರ್ಬನ್ ಕೋ ಆಪ್ ಕ್ರೆಡಿಟ್ ಸೊಸಾಯಿಟಿಯು 91ಲಕ್ಷ 66 ಸಾವಿರ ಲಾಭಗಳಿಸಿದೆ. ಶೇರು ಸದಸ್ಯರು 3,619 ಹೊಂದಿ,ಶೇರು ಬಂಡವಾಳ 88,76 ಲಕ್ಷ. ಠೇವಣಿಗಳು 47 ಕೋಟಿ 01 ಲಕ್ಷ .41,74 ಕೋಟಿಗಳ ಸಾಲ ವಿತರಿಸಿ. ದುಡಿಯುವ ಬಂಡವಾಳ 61 ಕೋಟಿ 27 ಲಕ್ಷ ಹೊಂದಿ ಮಾರ್ಚ ಅಂತ್ಯಕ್ಕೆ ಸಂಘವು 91,66 ಲಕ್ಷ ಲಾಭ ಗಳಿಸಿದೆ ಎಂದು ಅಧ್ಯಕ್ಷ ಸಂಗಪ್ಪ ನಿಡಗುಂದಿ ಹೇಳಿದರು.

ಬುಧವಾರ ಮಂಜುನಾಥ ಅರ್ಬನ್ ಕೋ ಅಫ್ ಕ್ರೆಡಿಟ್ ಸೊಸಾಯಿಟಿಯ 18 ನೇ ವಾರ್ಷಿಕ ಸರ್ವ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ.

ಶೀಘ್ರದಲ್ಲಿ ನಮ್ಮ ಸಂಘದಿಂದ ಖರೀದಿಸಿದ ನಿವೇಶನದಲ್ಲಿ ಸ್ವ–ಂತದಾದ ಕಟ್ಟಡ ನಿರ್ಮಾಣ ಮಾಡುವ ಯೋಜನೆಯಿದೆ ಶೇರುದಾರರಿಗೆ ಲಾಭಾಂಶದಲ್ಲಿ ಶೇ 12 ರಷ್ಟು ಲಾಭಾಂಶ ವಿತರಿಸುತ್ತಿದ್ದೇವೆ.ಶೀಘ್ರದಲ್ಲಿ ಇನ್ನು ಎರಡು ಶಾಖೆಗಳನ್ನು ಪ್ರಾರಂಬಿಸಲಾಗುವದು.ಸದ್ಯ ಈಗ ಇರುವ ಆರು ಶಾಖೆಗಳು ಪ್ರಗತಿಯಲ್ಲಿವೇ ಎಂದರು. ಮತ್ತು ಪ್ರಧಾನ ಕಛೇರಿಯು ವವ್ಯಹಾರವು ಶೇರುದಾರರ ಮತ್ತು ಠೇವುದಾರರ ಸಹಕಾರದಿಂದ ವರ್ಷದಿಂದ ವರ್ಷಕ್ಕೆ ಪ್ರಗತಿ ಕಾಣುತ್ತಿದೆ ಎಂದರು

ಸಂಘದ ಉಪಾಧ್ಯಕ್ಷ ಶಿವಬಸು ಕುಡಚಿ, ಮಾತನಾಡಿ, ತಾನು ಎಲ್ಲರಿಗಾಗಿ ಎಲ್ಲರು ನನಗಾಗಿ ಎಂಬ ತತ್ವದ ಅಡಿಯಲ್ಲಿ ಪ್ರಾರಂಬಿಸಿದ ಈ ಸಂಸ್ಥೆಯ ಅಡಿಪಾಯ ಶೇರುದಾರರು ಠೇವುದಾರರು ಎಂದರು. ವೇದಿಕೆಯ ಮೇಲೆ ನಿರ್ಧೇಶಕರಾದ ರುದ್ರಪ್ಪ ಬಳಿಗಾರ,ಶಿವಬಸು ಸುಣದೋಳಿ,ಶಿವಬೋಧ ಉದಗಟ್ಟಿ,ಪಾಂಡುರಂಗ ಮಹೇಂದ್ರಕರ, ಪ್ರಶಾಂತ ನಿಡಗುಂದಿ, ಶಿವಪ್ಪ ಭುಜನ್ನವರ, ಶೈಲಜಿ ನಾರಯಣಕರ, ಲಕ್ಷ್ಮಿ ಶಿವಾಪೂರ, ರಶ್ಮಿ ಸಸಾಲಟ್ಟಿ, ಶೇರುದಾರರು ಹಾಗೂ ಸಂಘದ ಹಿತೈಸಿಗಳು ಹಾಗೂ ಘಟಪ್ರಭಾ, ಮಹಾಲಿಂಗಪೂರ, ಹಾರೂಗೇರಿ. ಗೋಕಾಕ .ತೇರದಾಳ.ಕಬ್ಬೂರ ಶಾಖಾ ಸಲಹಾ ಸಮಿತಿಯ ಸದಸ್ಯರು, ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು,

ಪ್ರಧಾನ ಕಾರ್ಯದರ್ಶಿ ಬಸವರಾಜ ಕುದರಿ ಸ್ವಾಗತಿಸಿದರು, ಸಹ ಕಾರ್ಯದರ್ಶಿ ಮಲ್ಲಿಕಾರ್ಜುನ ಹಂದಿಗುಂದ ವಂದಿಸಿದರು,



SATY MITHI
Kannada Daily Morning

**ಮಳೆ ಕೈಕೊಟ್ಟ ಬೆನ್ನಲ್ಲೇ ಗ್ರಾಮಸ್ಥರ ವಿಶಿಷ್ಟ ಆಚರಣೆ । ವರುಣನ ಕೃಪೆಗಾಗಿ ವಿಶೇಷ ಪೂಜೆ**

# ಬಾಗಲಕೋಟೆಯಲ್ಲಿ ಮಳೆಗಾಗಿ ಕತ್ತೆಗಳ ಮದುವೆ!

**ಸತ್ಯಮಿಥ್ಯ ಸುದ್ದಿಮೂಲ ಬಾಗಲಕೋಟೆ:**
ಮಳೆ ಕೈಕೊಟ್ಟು ಕೃಷಿ ಚಟುವಟಿಕೆಗಳಿಗೆ ಹೊಡೆತ ಬಿದ್ದಿರುವ ಹಿನ್ನೆಲೆಯಲ್ಲಿ, ಉತ್ತಮ ಮಳೆಯಾಗಲಿ ಎಂದು ಪ್ರಾರ್ಥಿಸಿ ಗ್ರಾಮಸ್ಥರು ವಿಶಿಷ್ಟ ರೀತಿಯಲ್ಲಿ ಕತ್ತೆಗಳ ಮದುವೆ ನೆರವೇರಿಸಿದ ಘಟನೆ ಗಮನ ಸೆಳೆಯಿತು.

ಮಳೆಯ ಅಭಾವದಿಂದ ಹೊಲಗಳಲ್ಲಿ ಬಿತ್ತನೆ ಮಾಡಿರುವ ಬೆಳೆಗಳು ಒಣಗುವ ಆತಂಕ ರೈತರನ್ನು ಕಾಡುತ್ತಿದೆ. ದಿನದಿಂದ ದಿನಕ್ಕೆ ಬಿಸಿಲಿನ ತಾಪ ಹೆಚ್ಚಾಗುತ್ತಿದ್ದು, ಮಳೆಗಾಗಿ ರೈತರು ಆಕಾಶದತ್ತ ಮುಖ ಮಾಡುವಂತಾಗಿದೆ. ಈ ಹಿನ್ನೆಲೆಯಲ್ಲಿ ಗ್ರಾಮಸ್ಥರು ತಮ್ಮ ಸಾಂಪ್ರದಾಯಿಕ ನಂಬಿಕೆಯಂತೆ ಕತ್ತೆಗಳಿಗೆ ಮದುವೆ ಮಾಡಿಸುವ ಮೂಲಕ ವರುಣದೇವನನ್ನು ಒಲಿಸಿಕೊಳ್ಳಲು ಮುಂದಾದರು.

ಕತ್ತೆಗಳನ್ನು ಮದುವೆ ವಧು-ವರರಂತೆ ಅಲಂಕರಿಸಿ, ಗ್ರಾಮಸ್ಥರ ಸಮ್ಮುಖದಲ್ಲಿ ಮದುವೆಯ ಸಂಪ್ರದಾಯದಂತೆ ವಿವಿಧ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಬಳಿಕ ವಿಶೇಷ ಪೂಜೆ ಸಲ್ಲಿಸಿ, "ಸಕಾಲಕ್ಕೆ ಉತ್ತಮ ಮಳೆಯಾಗಲಿ, ಕೆರೆ-ಕಟ್ಟೆಗಳು ತುಂಬಲಿ, ರೈತರ ಜಮೀನುಗಳಲ್ಲಿ ಸಮೃದ್ಧ ಬೆಳೆ ಬರಲಿ" ಎಂದು ಪ್ರಾರ್ಥಿಸಲಾಯಿತು.

ಈ ವಿಶಿಷ್ಟ ಆಚರಣೆಯಲ್ಲಿ ಗ್ರಾಮಸ್ಥರು ಉತ್ಸಾಹದಿಂದ ಪಾಲ್ಗೊಂಡಿದ್ದು, ಮಹಿಳೆಯರು ಹಾಗೂ ಮಕ್ಕಳು ಸೇರಿದಂತೆ ಹಲವರು ಕುತೂಹಲದಿಂದ ವೀಕ್ಷಿಸಿದರು. ಕತ್ತೆಗಳ ಮದುವೆಯ ಸುದ್ದಿ ತಿಳಿದು ಸುತ್ತಮುತ್ತಲಿನ ಗ್ರಾಮಗಳ ಜನರೂ ಆಗಮಿಸಿ, ಆಚರಣೆಗೆ ಸಾಕ್ಷಿಯಾದರು.

**ಮಳೆಗಾಗಿ ರೈತರ ಮೊರೆ:** ಮಳೆ ಕೊರತೆಯಿಂದ ಕೃಷಿ ಕ್ಷೇತ್ರದ ಮೇಲೆ ನೇರ ಪರಿಣಾಮ ಬೀರುತ್ತಿದ್ದು, ಬಿತ್ತನೆ, ಗೊಬ್ಬರ, ಬೀಜ ಹಾಗೂ ಕೃಷಿ ಚಟುವಟಿಕೆಗಳಿಗೆ ಈಗಾಗಲೇ ಹಣ ಖರ್ಚು ಮಾಡಿರುವ ರೈತರು ಆತಂಕದಲ್ಲಿದ್ದಾರೆ. ಮಳೆ ಇನ್ನಷ್ಟು ವಿಳಂಬವಾದರೆ ಬೆಳೆಗಳು ಹಾನಿಗೊಳಗಾಗುವ ಸಾಧ್ಯತೆ ಇದೆ. ಹೀಗಾಗಿ ಗ್ರಾಮಸ್ಥರ ಈ ಆಚರಣೆ ಕೇವಲ ಸಂಪ್ರದಾಯವಾಗಿರದೆ, ಮಳೆಯ ನಿರೀಕ್ಷೆಯಲ್ಲಿರುವ ರೈತರ ಆತಂಕ ಹಾಗೂ ವರುಣನ ಕೃಪೆಗಾಗಿ ಅವರ ಮೊರೆಯ ಪ್ರತೀಕವಾಗಿದೆ.

ವಿಜ್ಞಾನ-ತಂತ್ರಜ್ಞಾನ ಮುಂದುವರಿದರೂ ಗ್ರಾಮೀಣ ಪ್ರದೇಶಗಳಲ್ಲಿ ಮಳೆಯೊಂದಿಗೆ ಬೆಸೆದುಕೊಂಡಿರುವ ಇಂತಹ ಸಾಂಪ್ರದಾಯಿಕ ನಂಬಿಕೆಗಳು ಇಂದಿಗೂ ಜೀವಂತವಾಗಿವೆ. ಉತ್ತಮ ಮಳೆಯಾಗಿ ರೈತರ ಹೊಲಗಳು ಹಸಿರಾಗಲಿ ಎಂಬ ಆಶಯದೊಂದಿಗೆ ಗ್ರಾಮಸ್ಥರು ಕತ್ತೆಗಳ ಮದುವೆ ನೆರವೇರಿಸಿ ವರುಣದೇವನ ಮೊರೆಹೋದರು.




# ಜ್ಯೋತಿ ಅರ್ಬನ್ ಕೋ ಆಪ್ ಕ್ರೆಡಿಟ್ ಸೊಸೈಟಿ ವಾರ್ಷಿಕ ಸಭೆ

**ಸತ್ಯಮಿಥ್ಯ ಸುದ್ದಿಮೂಲ ಮೂಡಲಗಿ :**
ಶೇರುದಾರರ ಹಾಗೂ ಠೇವುದಾರರ ಸಹಕಾರದಿಂದ ಸಂಘಕ್ಕೆ ಭವ್ಯವಾದ ಹಾಗೂ ಸುಂದರವಾದ ಹೊಸ ಕಟ್ಟಡವನ್ನು ಪ್ರಾರಂಬಿಸಿದ್ದೆವೆ. ಯರಗಟ್ಟಿಯಲ್ಲಿ ಸಹ ಸಂಘಕ್ಕಾಗಿ ನಿವೇಶನ ಖರೀದಿ ಮಾಡಲಾಗಿದ್ದೆ ಎಂದು ಹರ್ಷದಿಂದ ಹೇಳುತ್ತಾ ಸಂಘವು ಮಾರ್ಚ ಅಂತ್ಯಕ್ಕೆ 1ಕೋಟಿ 30 ಲಕ್ಷ ಕೋಟಿ ಲಾಭ ಹೊಂದಿದೆ ಎಂದು ಜ್ಯೋತಿ ಸೊಸೈಟಿಯ ಅಧ್ಯಕ್ಷ ಮಲ್ಲಪ್ಪ ಮದಗುಣಕಿ ಹೇಳಿದರು.

ಬುಧವಾರನಡೆದಜ್ಯೋತಿಅರ್ಬನ್‌ಕೋಆಪ್‌ಕ್ರೆಡಿಟ್‌ಸೊಸಾಯಿಟಿಯ21 ನೇ ವಾರ್ಷಿ ಸರ್ವ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶೀಘ್ರವಾಗಿ ಇನ್ನು ಐದು ಹೊಸ ಶಾಖೆಗಳನ್ನು ಪ್ರಾರಂಭಿಸು ಯೋಜನೆ ಇದ್ದು ಮಾರ್ಚ ಅಂತ್ಯಕ್ಕೆ ಸಂಘವು 5839 ಸದಸ್ಯರನ್ನು ಹೊಂದಿ. 1.66 ಕೋಟಿ ಶೇರು ಸಂಗ್ರಹಿಸಿ. 2.33 ಕೋಟಿ ನಿಧಿ ಜಮ ಮಾಡಿ.101 ಕೋಟಿ ದುಡಿಯುವ ಬಂಡವಾಳ ಹೊಂದಿ. 91.22 ಕೋಟಿ ಠೇವುಗಳನ್ನು ಸಂಗ್ರಹಿಸಿ. 58.11 ಸಾಲ ವಿತರಿಸಿ ಮಾರ್ಚ ಅಂತ್ಯಕ್ಕೆ 1 ಕೋಟಿ 30 ಲಕ್ಷ ಲಾಭ ಹೊಂದಿದೆ ಎಂದರು

ಮಾಹಿತಿ ಹಕ್ಕು ಹೋರಾಟಗಾರ ಭೀಮಪ್ಪ ಗಡಾದ ಹಾಗೂ ಲೇಖಪರಿಶೋಧಕ ಸೈದಪ್ಪ ಗದಾಡಿ. ರಾಯಬಾಗದ ಸಿ ಡಿ ಓ ಶಂಕರ ಕರಿಬಸನ್ನವರ ಮಾತನಾಡಿದರು. ವೇದಿಕೆಯ ಮೇಲೆ. ಗೋಕಾಕ ಸಿ ಡಿ ಓ ಎಸ್ ಬಿ ಬಿರಾದಾರ ಉಪಾಧ್ಯಕ್ಷ ಬಸವರಾಜ ನೇಮಗೌಡರ. ಆಡಳಿತ ಮಂಡಳಿಯ ಸದಸ್ಯರಾದ ಶ್ರೀಶೈಲ ಗಾಣಿಗೇರ.ಶ್ರೀಶೈಲ ಜೈನಾಪೂರ. ಚಂದ್ರು ಗಾಣಿಗ.ಅಪ್ಪಯ್ಯಪ್ಪ ನೇಮಗೌಡ.ಮಲ್ಲಪ್ಪ ಗಾಣಿಗೇರ.ಸಂಗಪ್ಪ ಕಾಳಪ್ಪಗೋಳ.ಆಶಾ ಗಾಣಿಗೇರ.ಮಂಜುಳಾ ನೇಮಗೌಡರ.ಸಾವಿತ್ರಿ ತೇಲಿ.ಮುತ್ತಪ್ಪ ವರ್ಗಿ ಹಾಗೂ ಯಾದವಾಡ,ಮಹಾಲಿಂಗಪೂರ,ಬನಹಟ್ಟಿ, ಯರಗಟ್ಟಿ,
ಅಥಣಿ,ಕಟ್ಟಕೋಳ,ಸಾವಳಗಿ,ಸಾಲಹಳ್ಳಿ,ಗದ್ದನಕೇರಿ ಕ್ರಾಸ ಶಾಖೆಗಳ ಸಲಹಾ ಸಮಿತಿ ಸದಸ್ಯರು ಇದ್ದರು.

ನಿರೂಪಣೆಯ ಮಲ್ಲಪ್ಪ ಜಾಡರ ನಡೆಸಿದರು. ಸ್ವಾಗತ ಪ್ರಧಾನ ವವ್ಯಸ್ಥಾಪಕ ಪ್ರಕಾಶ ರಡರಟ್ಟಿ ಸ್ವಾಗತಿಸಿ ನಾಗಪ್ಪ ಗಾಣಿಗೇರ ವಂದಿಸಿದರು.



# ಆಯುರ್ವೇದದ ಶ್ರೀಮಂತ ಪರಂಪರೆಯನ್ನು ಸಂಶೋಧನೆಯೊಂದಿಗೆ ಬೆಳೆಸೋಣ: ಜೈನ್

**ಸತ್ಯಮಿಥ್ಯ ಸುದ್ದಿಮೂಲ ಗದಗ :**
ಯುರ್ವೇದದ ಮೂಲ ತತ್ವಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ನಿರಂತರ ಸಂಶೋಧನೆಯಲ್ಲಿ ತೊಡಗಿಸಿಕೊಂಡಾಗ ಮಾತ್ರ ನಮ್ಮ ಸಾಂಪ್ರದಾಯಿಕ ವೈದ್ಯಕೀಯ ಜ್ಞಾನ ಮತ್ತು ಆಯುರ್ವೇದ ಕ್ಷೇತ್ರವು ಮತ್ತಷ್ಟು ಬೆಳೆಯಲು ಸಾಧ್ಯ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್ ಹೇಳಿದರು.

ನಗರದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆಯುಷ್ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಅಡಿಟೋ-ರಿಯಂ ಸಭಾಂಗಣದಲ್ಲಿ ಸೆಪ್ಟೆಂಬರ್ 23ರಂದು ಆಯೋಜಿಸಿದ್ದ ಧನ್ವಂತರಿ ಜಯಂತಿ ಅಂಗವಾಗಿ 11ನೇ ಆಯುರ್ವೇದ ದಿನಾಚರಣೆ, ಉಪನ್ಯಾಸ ಮಾಲಿಕೆ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ದೇಶವು ಆಯುರ್ವೇದ ಮತ್ತು ವೈದ್ಯಕೀಯ ವಿಜ್ಞಾನದಲ್ಲಿ ಅತ್ಯಂತ ಸುದೀರ್ಘ ಹಾಗೂ ಶ್ರೀಮಂತ ಪರಂಪರೆಯನ್ನು ಹೊಂದಿದೆ. ನಮ್ಮ ವೈದಿಕ ತತ್ವಚಿಂತನೆಗಳು ಹಾಗೂ ಪ್ರಾಚೀನ ಗ್ರಂಥಗಳು ಧನ್ವಂತರಿ, ಸುಶ್ರುತ ಹಾಗೂ ಚರಕರಂತಹ ಮಹಾನ್ ಋಷಿ-ಮುನಿಗಳ ಮಹತ್ವದ ಕೊಡುಗೆಯನ್ನು ತಿಳಿಸುತ್ತವೆ ಎಂದರು.

ಭಗವಾನ್ ಧನ್ವಂತರಿಯವರನ್ನು ಆಯುರ್ವೇದ ವಿಜ್ಞಾನದ ದೇವರೆಂದು ಕರೆಯಲಾಗುತ್ತದೆ. ಶಸ್ತ್ರಚಿಕಿತ್ಸಾ ಕ್ಷೇತ್ರದಲ್ಲಿ ಮಹತ್ವದ ಕೊಡುಗೆ ನೀಡಿದ ಸುಶ್ರುತರು 'ಸುಶ್ರುತ ಸಂಹಿತೆ' ಎಂಬ ಗ್ರಂಥವನ್ನು ರಚಿಸಿದ್ದಾರೆ ಎಂದು ಹೇಳಿದರು.

ಇಂದಿನ ಆಧುನಿಕ ವೈದ್ಯಕೀಯ ವಿಜ್ಞಾನ ಮತ್ತು ಸಾಂಪ್ರದಾಯಿಕ ಆಯುರ್ವೇದದ ನಡುವೆ ದಿನದಿಂದ ದಿನಕ್ಕೆ ಅಂತರ ಹೆಚ್ಚಾಗುತ್ತಿದ್ದು, ಇದಕ್ಕೆ ಸೂಕ್ತ ಸಂಶೋಧನೆಯ ಕೊರತೆಯೂ ಒಂದು ಪ್ರಮುಖ ಕಾರಣವಾಗಿದೆ. ಆಧುನಿಕ ವೈದ್ಯಕೀಯ ಕ್ಷೇತ್ರದಲ್ಲಿ ಪ್ರತಿದಿನವೂ ಹೊಸ ತಂತ್ರಜ್ಞಾನಗಳು ಹಾಗೂ ಸಂಶೋಧನೆಗಳು ಹೊರಬರುತ್ತಿವೆ. ಅದೇ ರೀತಿಯಲ್ಲಿ ನಮ್ಮ ಸಾಂಪ್ರದಾಯಿಕ ವೈದ್ಯಕೀಯ ಕ್ಷೇತ್ರದಲ್ಲೂ ಹೊಸ ಹೊಸ ಸಂಶೋಧನೆಗಳು ನಡೆಯಬೇಕು ಎಂದರು.

ಜಗತ್ತಿಗೆ ವೈದ್ಯಕೀಯ ಕ್ಷೇತ್ರದ ಕುರಿತು ಹೆಚ್ಚಿನ ತಿಳುವಳಿಕೆ ಇಲ್ಲದ ಕಾಲದಲ್ಲಿಯೇ ಭಾರತದಲ್ಲಿ ಶಸ್ತ್ರಚಿಕಿತ್ಸಾ ಉಪಕರಣಗಳು ಹಾಗೂ ಪ್ಲಾಸ್ಟಿಕ್ ಸರ್ಜರಿಯಂತಹ ಮುಂದುವರಿದ ಚಿಕಿತ್ಸಾ ಪದ್ಧತಿಗಳು ಅಸ್ತಿತ್ವದಲ್ಲಿದ್ದವು. ನಮ್ಮ ಪ್ರಾಚೀನ ಜ್ಞಾನವು ವೈಜ್ಞಾನಿಕ ಹಾಗೂ ಸಮೃದ್ಧವಾಗಿತ್ತು ಎಂಬುದಕ್ಕೆ ಇದು ನಿದರ್ಶನವಾಗಿದೆ ಎಂದು ಮುಕುಲ್ ಜೈನ್ ತಿಳಿಸಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ಜುಬೇದಾ ತಿಗಳೆರಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಆಯುರ್ವೇದದ ಪೌರಾಣಿಕ ಹಿನ್ನೆಲೆಯನ್ನು ವಿವರಿಸಿದರು. ಸಮುದ್ರ ಮಂಥನದ ಸಂದರ್ಭದಲ್ಲಿ ಭಗವಾನ್ ಧನ್ವಂತರಿಯವರು ಅಮೃತ ಕಲಶ ಹಾಗೂ ಆಯುರ್ವೇದ ಜ್ಞಾನದೊಂದಿಗೆ ಅವತರಿಸಿದರು ಎಂಬ ನಂಬಿಕೆಯಿದೆ. ತದನಂತರ ಅಶ್ವಿನಿ ಕುಮಾರರು, ಇಂದ್ರ, ಚರಕ, ಸುಶ್ರುತ ಹಾಗೂ ವಾಗ್ಭಟರಂತಹ ಮಹನೀಯರ ಮೂಲಕ ಕಾಯಚಿಕಿತ್ಸೆ ಮತ್ತು ಶಲ್ಯಚಿಕಿತ್ಸೆಯ ಮಹತ್ವದ ಜ್ಞಾನವು ಜಗತ್ತಿಗೆ ಲಭಿಸಿದೆ ಎಂದರು.

ಪ್ರಸ್ತುತ ರಾಸಾಯನಿಕಯುಕ್ತ ಆಹಾರ ಪದ್ಧತಿಯಿಂದ ಹಲವು ದುಷ್ಪರಿಣಾಮಗಳು ಎದುರಾಗುತ್ತಿದ್ದು, ಸೂಕ್ತ ಆಹಾರ-ವಿಹಾರ ಹಾಗೂ ಸಾತ್ವಿಕ ಆಹಾರ ಸೇವನೆಯ ಮೂಲಕ ದೇಹದ ದೋಷಗಳನ್ನು ನಿಯಂತ್ರಿಸಿಕೊಂಡು ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ತಿಳಿಸಿದರು.

ಇಂದಿನ ವೇಗದ ಜೀವನದಲ್ಲಿ ಕಾಮ, ಕ್ರೋಧ, ಲೋಭ, ಮೋಹ, ಮದ ಹಾಗೂ ಮಾತ್ಸರ್ಯಗಳೆಂಬ ಅರಿಷಡ್ವರ್ಗಗಳನ್ನು ಜಯಿಸಿ ಮಾನಸಿಕ ಸ್ವಾಸ್ಥ್ಯವನ್ನು ಕಾಪಾಡಿಕೊಳ್ಳುವುದು ಅಗತ್ಯವಾಗಿದೆ. ಅಸೂಯೆ ಹಾಗೂ ಅಹಂಕಾರಗಳನ್ನು ತೊರೆದು ಪ್ರೀತಿಯಿಂದ ಕೂಡಿ ಬಾಳುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ದೇವರಿಂದ ದೊರೆತ ಈ ಜೀವನದಲ್ಲಿ ಸದ್ಗುಣಗಳನ್ನು ಬೆಳೆಸಿಕೊಂಡು, ಪರೋಪಕಾರ ಹಾಗೂ ಸಮಾಜಕ್ಕೆ ನಿಸ್ವಾರ್ಥ ಕೊಡುಗೆ ನೀಡುವ ಮೂಲಕ ಪ್ರಗತಿ ಸಾಧಿಸಬೇಕು ಎಂದು ಹೇಳಿದರು.

ಆಯುರ್ವೇದ ಶಾಸ್ತ್ರವು ಬೋಧಿಸುವ ಈ ಜೀವನ ಪದ್ಧತಿಯನ್ನು ಮುಂದಿನ ಪೀಳಿಗೆಗೆ ಮುಂದುವರಿಸಿಕೊಂಡು ಹೋಗುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಸಮಾಜದಲ್ಲಿ ಶಾಂತಿ ಮತ್ತು ಆರೋಗ್ಯವನ್ನು ನೆಲೆಗೊಳಿಸಲು ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಡಾ. ಜುಬೇದಾ ತಿಗಳೆರಿ ಹೇಳಿದರು. ಕಾರ್ಯಕ್ರಮದಲ್ಲಿ ಡಾ.ಸಂಜೀವ ನರಪ್ಪನವರ, ಡಾ.ಎಂ.ಎ. ಹದಿಮನಿ, ಡಾ.ಸಾಯಿಪ್ರಕಾಶ ಮಡಿವಾಳರ, ಸಹಾಯಕ ಆಡಳಿತ ಅಧಿಕಾರಿ ಸುಧಾ ಜಾಳಿಹಾಲ್, ಡಾ. ಪವನ್, ಡಾ. ಆನಂದ್ ಕರಿಯವರ್ ಸೇರಿದಂತೆ ಇಲಾಖೆಯ ಅಧಿಕಾರಿಗಳು ಹಾಗೂ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಡಾ.ಬಿ.ಎಂ. ಲೋಕಾಪುರಿ ಅವರು ನಿರೂಪಿಸಿದರು, ಡಾ.ಕುಶಾಲ ಕೋರೆ ವಂದಿಸಿದರು.



# ಜೆಡಿಎಸ್ ಪದವೀಧರ ಕ್ಷೇತ್ರ ಚುನಾವಣೆ: ಸೆ.24ರಂದು ದಾವಣಗೆರೆ ಜಿಲ್ಲಾಮಟ್ಟದ ಪೂರ್ವಭಾವಿ ಸಭೆ



**ಹರಿಹರ :** ಅಕ್ಟೋಬರ್ 23ರಂದು ನಡೆಯಲಿರುವ ಪದವೀಧರ ಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಕರ್ನಾಟಕ ಪ್ರದೇಶ ಜನತಾದಳ (ಜಾತ್ಯತೀತ) ಪಕ್ಷದ ದಾವಣಗೆರೆ ಜಿಲ್ಲಾಮಟ್ಟದ ಪೂರ್ವಭಾವಿ ಸಭೆಯನ್ನು ಸೆಪ್ಟೆಂಬರ್ 24ರಂದು ಆಯೋಜಿಸಲಾಗಿದೆ.

ಗುರುವಾರ ಮಧ್ಯಾಹ್ನ 12 ಗಂಟೆಗೆ ದೊಡ್ಡಬಾತಿಯ ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆ ಆವರಣದಲ್ಲಿರುವ ಶ್ರೀ ವಿನಾಯಕ ದೇವಸ್ಥಾನದಲ್ಲಿ ಸಭೆ ನಡೆಯಲಿದೆ. ಜೆಡಿಎಸ್ ಜಿಲ್ಲಾಧ್ಯಕ್ಷ ಬಿ. ಚಿದಾನಂದಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ.

ಪಕ್ಷದ ಮುಖಂಡರು, ವಿವಿಧ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರು, ಮಹಿಳೆಯರು, ಯುವಕರು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್ ಮನವಿ ಮಾಡಿದ್ದಾರೆ.

# ಮಡಿಕೇಶ್ವರದಲ್ಲಿ ತಾಲೂಕು ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ ವೈಭವದ ಉದ್ಘಾಟನೆ

**ಸತ್ಯಮಿಥ್ಯ ಸುದ್ದಿಮೂಲ ಢವಳಗಿ:**
"ಉತ್ತಮ ಆರೋಗ್ಯ ಮತ್ತು ದೈಹಿಕ ಸದೃಢತೆಗೆ ಪೌಷ್ಟಿಕಾಂಶಯುಕ್ತ ಆಹಾರದ ಜೊತೆಗೆ ಕ್ರೀಡಾಕೂಟಗಳಲ್ಲಿ ಭಾಗವಹಿಸುವುದು ಅತ್ಯಗತ್ಯ. ದೈಹಿಕ ಕ್ರೀಡೆಗಳಷ್ಟೇ ಅಲ್ಲದೆ ಚೆಸ್,ಕೇರಂನಂತಹ ಮಾನಸಿಕ ಕ್ರೀಡೆಗಳಲ್ಲೂ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಳ್ಳಬೇಕು" ಎಂದು ಮುದ್ದೇಬಿಹಾಳ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಎಮ್.ಎಸ್. ಬಡದಾನಿ ಹೇಳಿದರು.

ಢವಳಗಿ ಸಮೀಪದ ಮಡಿಕೇಶ್ವರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ (ಸೆಪ್ಟೆಂಬರ್ 22) ನಡೆದ 2026-27ನೇ ಸಾಲಿನ ಮುದ್ದೇಬಿಹಾಳ ತಾಲೂಕು ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದ ಧ್ವಜಾರೋಹಣ ನೆರವೇರಿಸಿ, ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

"ಇಲ್ಲಿ ಭಾಗವಹಿಸಿರುವ ಎಲ್ಲಾ ವಿದ್ಯಾರ್ಥಿಗಳು ಉತ್ತಮ ಪ್ರತಿಭೆಯುಳ್ಳವರಾಗಿದ್ದು, ನಿರ್ಣಾಯಕರು ನೀಡುವ ತೀರ್ಪಿಗೆ ತಲೆಬಾಗಿ ಕ್ರೀಡಾಸ್ಫೂರ್ತಿಯಿಂದ ಆಟವಾಡಿ, ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಬೇಕು" ಎಂದು ಆಶಿಸಿದರು.

**ಊಟ, ಪಾಠದಷ್ಟೇ ಆಟವೂ ಮುಖ್ಯ:** ತಾಲೂಕು ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಶಂಕರಗೌಡ ಹೀರೇಗೌಡರ ಕ್ರೀಡಾಜ್ಯೋತಿ ಸ್ವೀಕರಿಸಿ ಮಾತನಾಡಿ, "ನಾವು ಸದೃಢವಾಗಿರಲು ಊಟ ಎಷ್ಟು ಮುಖ್ಯವೋ, ಪಾಠ ಮತ್ತು ಆಟವೂ ಅಷ್ಟೇ ಮುಖ್ಯ. ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಮನಸ್ಸು ಹಗುರವಾಗುವುದರ ಜೊತೆಗೆ ದೈಹಿಕವಾಗಿ ಸದೃಢರಾಗಲು ಸಾಧ್ಯ" ಎಂದರು.

**ಎಸ್. ಹಿಪ್ಪರಗಿ ಶಿಕ್ಷಕರ ಶ್ರಮ ಸ್ಮರಿಸಿದ ಶ್ರೀಗಳು:** ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಮಡಿಕೇಶ್ವರ ಯೋಗಾಶ್ರಮದ ಪರಮ ಪೂಜ್ಯ ಡಾ. ಶ್ರೀ ಶಿವಕುಮಾರ ಮಹಾಸ್ವಾಮಿಗಳು, "ಮಡಿಕೇಶ್ವರ ಗ್ರಾಮದ ಆರಾಧ್ಯ ದೈವ ಶ್ರೀ ಮಲ್ಲಿಕಾರ್ಜುನ ದೇವಸ್ಥಾನಕ್ಕೆ ಇರುವಷ್ಟೇ ಸುದೀರ್ಘ ಇತಿಹಾಸ ನಮ್ಮ ಶಾಲೆಗೂ ಇದೆ. ಹಿಂದೆ ಕಿರಿಯ ಪ್ರಾಥಮಿಕ ಶಾಲೆಯಾಗಿದ್ದ ಸಂದರ್ಭದಲ್ಲಿ ಆಗಮಿಸಿದ ಶಿಕ್ಷಕ ಎಸ್. ಹಿಪ್ಪರಗಿ ಅವರ ಕಠಿಣ ಶ್ರಮದಿಂದಾಗಿ ಇಂದು ಗ್ರಾಮದಲ್ಲಿ ತಾಲೂಕು ಮಟ್ಟದ ಕ್ರೀಡಾಕೂಟ ನಡೆಸಲು ಸಾಧ್ಯವಾಗಿದೆ. ಶಿಕ್ಷಕರಿಗೆ ಸಮಾಜದಲ್ಲಿ ಸಿಗುವ ಗೌರವ ಅವರು ಮಕ್ಕಳಿಗೆ ನೀಡುವ ಉತ್ತಮ ಶಿಕ್ಷಣದಿಂದ ಲಭಿಸುತ್ತದೆ" ಎಂದು ಸ್ಮರಿಸಿದರು.



**ಬಸವ ಬಾಲ ಭಾರತಿ ಶಾಲೆಯಿಂದ ಕ್ರೀಡಾಂಗಣ ಸಹಕಾರ:** ಸೆಪ್ಟೆಂಬರ್ 21ರ ರಾತ್ರಿ ಮಡಿಕೇಶ್ವರದಲ್ಲಿ ಸುರಿದ ಮಳೆಯಿಂದಾಗಿ ಖೋ-ಖೋ ಮೈದಾನ ಕೆಸರುಮಯವಾಗಿತ್ತು. ಈ ಹಿನ್ನೆಲೆಯಲ್ಲಿ ಢವಳಗಿಯ ಬಸವ ಬಾಲ ಭಾರತಿ ಹಿರಿಯ ಪ್ರಾಥಮಿಕ ಶಾಲೆಯ ವಿಶಾಲ ಮೈದಾನದಲ್ಲಿ ಮಧ್ಯಾಹ್ನ 3:30ರಿಂದ ಬಾಲಕರ ಖೋ-ಖೋ, ಎತ್ತರ ಜಿಗಿತ, ಉದ್ದ ಜಿಗಿತ ಹಾಗೂ ಓಟದ ಸ್ಪರ್ಧೆಗಳನ್ನು ನಡೆಸಲಾಯಿತು. ಕ್ರೀಡೆಗೆ ಅಗತ್ಯ ಸೌಕರ್ಯ ಕಲ್ಪಿಸಿ ಶಾಲೆಯ ಮುಖ್ಯಗುರು ರಮೇಶ ಮೂಲಿಮನಿ ಸಹಕರಿಸಿದರು.

**ಸರಕಾರಿ ಶಾಲೆಗಳ ಉಳಿವಿಗಾಗಿ ಶ್ರಮಿಸಿ**
**"ಶಾಲೆಯ ಪ್ರಗತಿಗೆ ಮುಖ್ಯಗುರುಗಳು ಹಾಗೂ ವಿದ್ಯಾರ್ಥಿಗಳ ಕಲಿಕೆಗೆ ಶಿಕ್ಷಕರು ಕಾರಣಕರ್ತರಾಗುತ್ತಾರೆ. ಶಾಲೆಯ ಅಳಿವು-ಉಳಿವು ಶಿಕ್ಷಕರ ಮೇಲೆಯೇ ನಿಂತಿರುತ್ತದೆ. ಕನ್ನಡ ಶಾಲೆಗಳ ಉಳಿವಿಗಾಗಿ ಶಿಕ್ಷಕರು ಹೆಚ್ಚಿನ ಶ್ರಮ ವಹಿಸಬೇಕು. ತಾಲೂಕಿನಲ್ಲಿ ಯಾವುದೇ ಸರಕಾರಿ ಶಾಲೆ ಮುಚ್ಚದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಗಮನಹರಿಸಬೇಕು ಹಾಗೂ ಗುಣಮಟ್ಟದ ಬೋಧನೆಗೆ ಹೆಚ್ಚಿನ ಆದ್ಯತೆ ನೀಡಬೇಕು" ಎಂದು ಡಾ. ಶ್ರೀ ಶಿವಕುಮಾರ ಮಹಾಸ್ವಾಮಿಗಳು ಕರೆ ನೀಡಿದರು.**

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಕೆ.ಪಿ. ಬಿರಾದಾರ, ಶಾಂತಗೌಡ ಪಾಟೀಲ, ಶಿವಣ್ಣ ಅಲ್ಲಾಪೂರ, ಬಿ.ಎಚ್. ಮುದ್ನೂರ, ಎನ್.ಬಿ. ಪಿಂಜಾರ, ವಿ.ಸಿ. ಕೆರೂರ, ಬಿ.ಟಿ. ವಜ್ಜಲ, ಮಡಿಕೇಶ್ವರ ವೈದ್ಯಾಧಿಕಾರಿ ಡಾ. ಚೇತನ ಬಾಗೇವಾಡಿ, ದೈಹಿಕ ಶಿಕ್ಷಣ ಪರಿವೀಕ್ಷಕ ಎಸ್.ಬಿ. ಕುಂಬಾರ, ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ. ದಮ್ಮೂರಮಠ, ಸಹಾಯಕ ನಿರ್ದೇಶಕ ಡಾ. ಎಮ್.ಎಮ್. ಬೆಳಗಲ್, ಸ್ಥಳೀಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರು ಬಸಮ್ಮ ಬಿ. ರೂಡಗಿ, ದೈಹಿಕ ಶಿಕ್ಷಕ ರಮೇಶ ಮಠಪತಿ, ಸಿಆರ್‌ಪಿಗಳು ಹಾಗೂ ಶಿಕ್ಷಕವೃಂದ ಉಪಸ್ಥಿತರಿದ್ದರು.

ಮಹೇಶ ಕೊಣ್ಣೂರ ಅವರು ಕ್ರೀಡಾಪಟುಗಳಿಗೆ ಹಾಗೂ ದೈಹಿಕ ಶಿಕ್ಷಕರಿಗೆ ಪ್ರಮಾಣ ವಚನ ಬೋಧಿಸಿದರು. ಶ್ರೀಮತಿ ಅಂಬಿಕಾ ಕರಕಪ್ಪಗೋಳ ಹಾಗೂ ಬಿ.ಎಸ್. ಹಂಚಲಿ ಕಾರ್ಯಕ್ರಮ ನಿರೂಪಿಸಿದರು. ಶಾಂತಲಾ ಪಾಟೀಲ ವಂದಿಸಿದರು.

SATYAMITHI KANNADA DAILY MORNING OWNER, PUBLISHER, BY: CHANNAVEERAPPA NINGAPPA SAMAGANDI PUBLISHED FROM: KELAGAL{ETH, NEAR BASAVESHWAR DEVASTAN, HOME NO. 169, WARD NO, 4 MAIN ROAD GAJEDRAGAD, GADAG KARNATAKA - 582114 PRINTED AT: MAILARALINGESHWAR PRINTERS, WARD NO, 3, SUDI TQ, GAJENDRAGAD, GADAG, KARNATAKA- 582114